ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೬

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಗುರುವಾರ, ದಿನಾಂಕ: ೨ನೇ ಜುಲೈ ೨೦೧೫**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

---

## ರಾಜ್ಯದ ಸರ್ಕಾರಿ ಕಛೇರಿಗಳಲ್ಲಿ ಸೌರ ವಿದ್ಯುತ್ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯಶಂಕರ್(ವಿಧಾನ ಸಭೆಯಿಂದ ಚುನಾಯಿತರಾದವರು):–**

೨೩೧ (೫೬೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರತೀ ಸರ್ಕಾರಿ, ಕಛೇರಿಗಳಿಗೆ ಸೌರ ವಿದ್ಯುತ್ ಸೌಲಭ್ಯದ ಅನುಕೂಲತೆಗಳನ್ನು ಒದಗಿಸಿಕೊಡಲು ಸರ್ಕಾರ ಯೋಜಿಸುತ್ತಿದೆಯೇ ;

(ಆ) ರಾಜ್ಯದಲ್ಲಿರುವ ಸರ್ಕಾರಿ, ಅರೆ ಸರ್ಕಾರಿ ಕಛೇರಿಗಳ ಕಟ್ಟಡಗಳಿಗೆ ಈಗಾಗಲೇ ಮೇಲ್ಕಾಣಿಸಿದ ಸೌಲಭ್ಯದ ಅನುಕೂಲತೆಯನ್ನು ಒದಗಿಸಲಾಗಿದ್ದಲ್ಲಿ ಯಾವ ಯಾವ ಭಾಗದಲ್ಲಿ ಈ ರೀತಿಯ ಅನುಕೂಲತೆಗಳನ್ನು ಒದಗಿಸಲಾಗಿದೆ ; (ವಿವರಗಳನ್ನು ಒದಗಿಸುವುದು)

(ಇ) ಕೇಂದ್ರ ಸರ್ಕಾರದಿಂದ ಈ ರೀತಿಯ ಯೋಜನೆಗಳ ಅನುಷ್ಠಾನಕ್ಕಾಗಿ ಬಹಳ ದೊಡ್ಡ ಪ್ರಮಾಣದ ಆರ್ಥಿಕ ನೆರವಿನ ಅನುಕೂಲತೆಗಳು ಲಭ್ಯವಿದ್ದು, ಕೇಂದ್ರದಿಂದ ಲಭ್ಯವಿರುವ ಈ ರೀತಿಯ ನೆರವನ್ನು ಸಕಾಲದಲ್ಲಿ ಪಡೆದುಕೊಳ್ಳಲು ಸದ್ಯ ರಾಜ್ಯ ಸರ್ಕಾರ ಅನುಸರಿಸುತ್ತಿರುವ ಮಾರ್ಗೋಪಾಯಗಳು ಯಾವುವು ; ಅದಲ್ಲದೇ ಕಾಲ ಕಾಲಕ್ಕೆ ಈ ಹಿನ್ನೆಲೆಯಲ್ಲಿ ಆರ್ಥಿಕ ನೆರವಿಗಾಗಿ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಸಲ್ಲಿಸಲಾದ ಬೇಡಿಕೆಯೇನು ; (ಮಾಹಿತಿಯ ವಿವರಗಳನ್ನು ಒದಗಿಸುವುದು)

(ಈ) ಈ ರೀತಿಯ ಆರ್ಥಿಕ ಸೌಲಭ್ಯಗಳನ್ನು ಈಗಾಗಲೇ ಪಡೆದುಕೊಳ್ಳುತ್ತಿರುವ ಅನ್ಯ ರಾಜ್ಯಗಳು ಯಾವುವು ? (ವಿವರಗಳನ್ನು ಒದಗಿಸುವುದು)

## ಮಳೆ ನೀರು ಕೊಯ್ಲು ಪದ್ಧತಿಯನ್ನು ಕಡ್ಡಾಯಗೊಳಿಸುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು)**:–

೨೩೨ (೪೯) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ, ಅರೆಸರ್ಕಾರಿ ಹಾಗೂ ಸಾರ್ವಜನಿಕ ಜಾಗಗಳಲ್ಲಿ ಮಳೆ ನೀರು ಸಂಗ್ರಹ ಹಾಗೂ ಮಳೆ ನೀರು ಕೊಯ್ಲಿನ ವ್ಯವಸ್ಥಿತ ಬಳಕೆಗಾಗಿ ಸರ್ಕಾರ ಈವರೆವಿಗೂ ರೂಪಿಸಿಕೊಂಡಿರುವ ಯೋಜನೆಗಳು ಯಾವುವು ;

(ಆ) ನಗರ ಪ್ರದೇಶದ ಪ್ರತೀ ಮನೆಗಳಲ್ಲೂ ಮಳೆ ನೀರು ಕೊಯ್ಲು ವ್ಯವಸ್ಥೆಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಹಾಗೂ ಈ ರೀತಿಯ ಕ್ರಮಗಳನ್ನು ನಗರ ಪ್ರದೇಶದಲ್ಲಿ ಪ್ರೋತ್ಸಾಹಿಸಲು ಸರ್ಕಾರ ಅನುಸರಿಸುತ್ತಿರುವ ಕ್ರಮಗಳೇನು ? (ವಿವರಗಳನ್ನು ಒದಗಿಸುವುದು)

## ಪ್ರಾಕೃತಿಕ ಸಂಪತ್ತನ್ನು ಕಾಪಾಡಿಕೊಳ್ಳುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು)**:–

೨೩೩ (೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಸ್ತೆಗಳ ಡಾಂಬರೀಕರಣದ ಸಂದರ್ಭದಲ್ಲಿ ಹಾಗೂ ಗೃಹ ನಿರ್ಮಾಣ ಮತ್ತು ಇತರೆ ಕಟ್ಟಡಗಳ ನಿರ್ಮಾಣ ಸನ್ನಿವೇಶಗಳಲ್ಲಿ ಜಲ್ಲಿ ಕಲ್ಲು ಬಳಕೆ ಸಾಮಾನ್ಯವಾಗಿದ್ದು, ಜಲ್ಲಿ ಕಲ್ಲು ಬಳಕೆಗಾಗಿ ಪ್ರಕೃತಿದತ್ತವಾಗಿ ಲಭ್ಯವಿರುವ ಬೆಟ್ಟ ಗುಡ್ಡಗಳನ್ನು ನಾವು ಅವಲಂಬಿಸುವುದು ಅನಿವಾರ್ಯ ಎಂಬುದನ್ನು ಸರ್ಕಾರ ಒಪ್ಪುತ್ತದೆಯೇ ;

(ಆ) ಹಾಗಿದ್ದಲ್ಲಿ, ಬಹುತೇಕ ಬೆಟ್ಟ–ಗುಡ್ಡಗಳು ವಿನಾಶದ ಅಂಚಿಗೆ ತಲುಪಿದ್ದು, ಸುತ್ತ ಮುತ್ತಲಿನ ಪರಿಸರದ ಮೇಲೆ, ಪ್ರಕೃತಿಯ ಮೇಲೆ ಹಾಗೂ ಜೀವ ಜಗತ್ತಿನ ಮೇಲೆ ಮತ್ತು ತನ್ಮೂಲಕ ಅದು ಸೃಷ್ಟಿಸಬಹುದಾದ ಪ್ರಾಕೃತಿಕ ಅಸಮತೋಲನದಿಂದ ಉಂಟಾಗಬಹುದಾದ ವ್ಯತಿರಿಕ್ತ ಪರಿಣಾಮಗಳ ಬಗ್ಗೆ ವೈಜ್ಞಾನಿಕವಾಗಿ ವಿಶ್ಲೇಷಣೆಗಳನ್ನು ನಡೆಸಲಾಗಿದೆಯೇ ;

(ಇ) ಅಭಿವೃದ್ಧಿ ಕಾರ್ಯಗಳ ಅವಶ್ಯಕತೆಗಾಗಿ ಸದ್ಯ ಅನುಸರಿಸುತ್ತಿರುವ ಈ ರೀತಿಯ ಪದ್ಧತಿಗಳನ್ನು ಕೈಬಿಟ್ಟು ಮುಂದಿನ ದಿನಗಳಲ್ಲಿ ಅನುಸರಿಸಹುದಾದ ಪರ್ಯಾಯ ಮಾರ್ಗಗಳು ಯಾವುವು ; ಮತ್ತು ಇದಕ್ಕೆ ಸಂಬಂಧಿಸಿದಂತೆ ಮುಂದುವರೆದ ರಾಷ್ಟ್ರಗಳು ತಮ್ಮಲ್ಲಿ ಲಭ್ಯವಿರುವ ಪ್ರಾಕೃತಿಕ ಸಂಪತ್ತನ್ನು ಕಾಪಾಡಿಕೊಳ್ಳುವುದರೊಂದಿಗೆ ಅಭಿವೃದ್ಧಿ ಕಾರ್ಯಗಳಿಗಾಗಿ ಅವಶ್ಯವಿರುವ ಕಚ್ಚಾ ಪದಾರ್ಥಗಳನ್ನು ಸಂಗ್ರಹಿಸಲು ಅನುಸರಿಸುತ್ತಿರುವ ಪದ್ಧತಿಗಳು ಯಾವುವು ? (ವಿವರಗಳನ್ನು ಒದಗಿಸುವುದು)

## ಕೈಗಾರಿಕೆಗಳಲ್ಲಿ ಸೌದೆಯ ಬದಲಾಗಿ ಪರ್ಯಾಯ ವ್ಯವಸ್ಥೆ

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು)**:–

೨೩೪ (೮) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನೇಕ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು, ಅದರಲ್ಲೂ ಮಣ್ಣು ಮಿಶ್ರಿತ ಇಟ್ಟಿಗೆ ತಯಾರಿಸುವ ಘಟಕಗಳು ಇಟ್ಟಿಗೆಯನ್ನು ಸುಟ್ಟು ಹದ ಮಾಡಲು ಉರುವಲು ರೂಪದಲ್ಲಿ ಸೌದೆ ಬಳಸುತ್ತಿರುವುದನ್ನು ಹಾಗೂ ಇಂಧನದ ಮೂಲವಾಗಿ ಸೌದೆಯನ್ನು ಬಳಸುತ್ತಿರುವ ಪದ್ಧತಿಯನ್ನು ತಪ್ಪಿಸಲು ಸರ್ಕಾರದ ಮುಂದಿರುವ ಯೋಜನೆಗಳು ಯಾವುವು ;

(ಆ) ಅನೇಕ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳೂ ತಮ್ಮ ಉತ್ಪಾದನೆಗಾಗಿ ಉರುವಲು ರೂಪದಲ್ಲಿ ಸೌದೆಯನ್ನು ಬಳಸುತ್ತಿರುವ ಪದ್ಧತಿಯನ್ನು ಕೈಬಿಟ್ಟು ಕಲ್ಲಿದ್ದಲು, ಸೌರವಿದ್ಯುತ್ ಇತರೆ ಆಧುನಿಕ ಪದ್ಧತಿಯನ್ನು ಬಳಸಿಕೊಂಡು ಹಾಗೂ ಸದ್ಯದ ಈಗಿರುವ ಪದ್ಧತಿಯನ್ನು ಬದಲಾಯಿಸುವಂತೆ ನೋಡಿಕೊಳ್ಳಲು ಸಾಧ್ಯವಿಲ್ಲವೇ ;

(ಇ) ದೇಶದ ಅನ್ಯ ರಾಜ್ಯಗಳಲ್ಲಿ ಮತ್ತು ವಿದೇಶಗಳಲ್ಲಿ ಈ ರೀತಿಯ ಕೈಗಾರಿಕೆಗಳನ್ನು ಮುಂದುವರಿಸಲು ಅಳವಡಿಸಿಕೊಂಡ ತಾಂತ್ರಿಕ, ಆಧುನಿಕ ಹಾಗೂ ವೈಜ್ಞಾನಿಕ ಪದ್ಧತಿಗಳೇನು ? (ವಿವರಗಳನ್ನು ಒದಗಿಸುವುದು)

## ಮಾಜಿ ಸೈನಿಕರ ಪತ್ನಿಯರಿಗೆ ಪುನರ್‌ವಸತಿ ಸೌಲಭ್ಯ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೩೫ (೪೭೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮಾಜಿ ಸೈನಿಕರ ಪತ್ನಿಯರಿಗೆ ಪುನರ್ವಸತಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಪುನರ್ವಸತಿ ಸೌಲಭ್ಯ ಕೋರಿ ಬಂದಿರುವ ದೂರುಗಳು ಎಷ್ಟು ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಬೆಳಗಾವಿಯಲ್ಲಿ ಭಾರಿ ಕೈಗಾರಿಕೆಗಳ ಸ್ಥಾಪನೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೩೬ (೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) Education Hub ಎಂದೇ ಖ್ಯಾತಿಗಳಿಸಿರುವ ಬೆಳಗಾವಿಯಲ್ಲಿ ತಾಂತ್ರಿಕ ವಿಶ್ವವಿದ್ಯಾಲಯ, ತಾಂತ್ರಿಕ ಕಾಲೇಜುಗಳು, ಡಿಪ್ಲೋಮಗಳು, ಪದವಿ ಕಾಲೇಜು ಇತ್ಯಾದಿ ಅಧಿಕವಾಗಿರುವ ಶಿಕ್ಷಣ ಸಂಸ್ಥೆಗಳಿಂದ ಪ್ರತಿ ವರ್ಷ ವಿವಿಧ ಪದವಿ ಮುಗಿಸಿ ಹೊರ ಬರುತ್ತಿರುವ ವಿದ್ಯಾರ್ಥಿಗಳು ಉದ್ಯೋಗಕ್ಕಾಗಿ ಬೆಂಗಳೂರು ಅಥವಾ ಹೊರ ರಾಜ್ಯ ಅಥವಾ ಹೊರ ದೇಶಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವ್ಯಾಸಂಗ ಮುಗಿಸಿ ಹೊರ ಬರುತ್ತಿರುವ ವಿದ್ಯಾರ್ಥಿಗಳ ಕನಿಷ್ಠ ಪ್ರಮಾಣಕ್ಕಾದರೂ ಬೆಳಗಾವಿ ನಗರ ಅಥವಾ ಉತ್ತರ ಕರ್ನಾಟಕದಲ್ಲಿ ಉದ್ಯೋಗ ಸೃಷ್ಟಿಸಲು ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಸ್ಥಾಪನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಉತ್ತರ ಕರ್ನಾಟಕ ಮತ್ತು ನಿರುದ್ಯೋಗಿಗಳ ಹಿತದೃಷ್ಟಿಯಿಂದ ಅತೀ ತುರ್ತಾಗಿ ಬೆಳಗಾವಿ ಅಥವಾ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಉತ್ತರ ಕರ್ನಾಟಕದ ಧಾರವಾಡದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯವನ್ನು ಪ್ರಾರಂಭಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೨೩೭ (೫೫) ಕಾನೂನು, ಸಂಸದೀಯ, ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಪಶುವೈದ್ಯ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು ; ಅವುಗಳು ಯಾವ ಯಾವ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಆ) ಉತ್ತರ ಕರ್ನಾಟಕದ ಬೆಳಗಾವಿ ವಿಭಾಗದಲ್ಲಿರುವ ಒಟ್ಟು ಪಶುವೈದ್ಯ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯಕೀಯ ಮಹಾವಿದ್ಯಾಲಯಗಳು ಪ್ರಾದೇಶಿಕವಾರು ಅಸಮಾನತೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಉತ್ತರ ಕರ್ನಾಟಕದ ಧಾರವಾಡದಲ್ಲಿ ಹೊಸ ಪಶುವೈದ್ಯ ಮಹಾವಿದ್ಯಾಲಯವನ್ನು ಸ್ಥಾಪಿಸಿ ಈ ಭಾಗದ ಜನರ ಹೈನೋದ್ಯಮ ಮತ್ತು ಪಶು ಸಂಗೋಪನೆಗೆ ಹೆಚ್ಚಿನ ಅವಕಾಶ ಕಲ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿ ನೀಡಲು ವಿಳಂಬ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ)** –

೨೩೮ (೪೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾಹಿತಿ ಹಕ್ಕು ಅಧಿನಿಯಮದಡಿ ಸಾರ್ವಜನಿಕರು ಕೋರಿದ ಮಾಹಿತಿಯನ್ನು ನಿಗದಿತ ಸಮಯದಲ್ಲಿ ನೀಡದೆ ವಿಳಂಬ ಮಾಡಿರುವುದರಿಂದ ೨೦೧೦ ರಿಂದ ಇಲ್ಲಿಯವರೆಗೆ ಅಧಿಕಾರಿಗಳಿಗೆ ವಿಧಿಸಲಾದ ಒಟ್ಟು ದಂಡದ ಮೊತ್ತವೆಷ್ಟು ; (ಇಲಾಖಾವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಮಾಹಿತಿ ಹಕ್ಕು ಅಧಿನಿಯಮದ ಪ್ರಕಾರ ಪ್ರತಿಯೊಂದು ಮಾಹಿತಿಯನ್ನು ಪಡೆದುಕೊಳ್ಳುವುದು ಸಾರ್ವಜನಿಕರ ಹಕ್ಕು, ಅದರಂತೆ ಅಧಿಕಾರಿಗಳು ನಿಯಮಿತ ಅವಧಿಯಲ್ಲಿ ಮಾಹಿತಿ ಒದಗಿಸುವುದು ಸರ್ಕಾರಿ ಅಧಿಕಾರಿಗಳ ಕರ್ತವ್ಯ ಅಲ್ಲವೇ ;

(ಇ) ಹಾಗಿದ್ದಲ್ಲಿ, ಜನರಿಂದ ಸಂಗ್ರಹಿಸಿದ ಸರ್ಕಾರದ ತೆರಿಗೆಯ (ಕೋಟಿ ಕೋಟಿ) ಹಣವು, ಅಧಿಕಾರಿಗಳ ನಿರ್ಲಕ್ಷ್ಯದಿಂದ ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಆಡಳಿತದಲ್ಲಿ ಪಾರದರ್ಶಕ ತರಲು ಮಾಹಿತಿ ಹಕ್ಕು ಅಧಿನಿಯಮವಿದ್ದು, ಪಾಲಿಸದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ;

(ಉ) ಅಧಿಕಾರಿಗಳ ತಪ್ಪಿನಿಂದ ಕೋಟ್ಯಾಂತರ ಹಣವನ್ನು ಸರ್ಕಾರ ದಂಡದ ರೂಪದಲ್ಲಿ ಭರಿಸಬೇಕಾಗಿದ್ದು, ಇದನ್ನು ಸಂಬಂಧಿಸಿದ ಅಧಿಕಾರಿಗಳಿಂದ ವಸೂಲಿ ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಹೋಂಸ್ಟೇಗಳಲ್ಲಿ ಅನೈತಿಕ ಚಟುವಟಿಕೆಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೨೩೯ (೪೬೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಸರ್ಕಾರದ ನೋಂದಣಿಯಿಲ್ಲದೆ, ಮೂರು ಸಾವಿರಕ್ಕಿಂತ ಹೆಚ್ಚು ಹೋಂಸ್ಟೇಗಳು ಕೊಡಗಿನ ಸಂಸ್ಕೃತಿಯನ್ನೇ ಅಳಿಸಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದಲ್ಲಾಳಿಗಳು, ಪಿಂಪ್‌ಗಳು ಹೊರ ಜಿಲ್ಲೆಗಳಿಂದ ಆಗಮಿಸುವ ಯಾತ್ರಾರ್ಥಿಗಳನ್ನು ಆಕರ್ಷಿಸಿ ಅವರ ಅಭಿರುಚಿಗಳಿಗೆ ಅನುಗುಣವಾಗಿ ಹೋಂಸ್ಟೇಗಳಿಗೆ ಕಳುಹಿಸಿಕೊಡುವುದು, ಅನೈತಿಕ ಚಟುವಟಿಕೆಗಳನ್ನು ನಡೆಸುವುದು, ನಕಲಿ ಪೋಲೀಸ್‌ಗಿರಿ ತೋರಿಸಿ, ಬೆದರಿಸಿ ಹಣ ಮಾಡುತ್ತಿದ್ದರೂ ಜಿಲ್ಲಾಡಳಿತ ಕ್ರಮಗಳನ್ನು ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೋಂಸ್ಟೇಗಳಿಗೆ ಬಂದು ಹೋಗುವವರ ವಿವರಗಳ ದಾಖಲೆಯನ್ನು ನಿರ್ವಹಿಸದೇ ಇರುವುದರಿಂದ ನಕ್ಸಲರು, ಸಮಾಜಘಾತಕರು ಈ ಹೋಂಸ್ಟೇಗಳಲ್ಲಿ ತಂಗಿದ್ದು ಆಶ್ರಯಗಳನ್ನು ಪಡೆದು, ಹಿಂಸಾಚಾರಗಳಿಗೆ

ಮತ್ತಿತರೆ ಅಕ್ರಮುಗಳಿಗೆ ಸಂಚುಗಳನ್ನು ರೂಪಿಸಲು ಬಳಕೆ ಮಾಡಿಕೊಳ್ಳುತ್ತಿದ್ದಾರೆಂಬ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ ಅನಧಿಕೃತ ಹೋಂಸ್ಟೇಗಳ ವಿರುದ್ಧ ಮತ್ತು ಅಲ್ಲಿ ನಡೆಯುತ್ತಿರುವ ಅಕ್ರಮುಗಳ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮುಗಳನ್ನು ತೆಗೆದುಕೊಳ್ಳಲಾಗಿದೆ ? (ವಿವರ ನೀಡುವುದು)

## ಬೆಳಗಾವಿ ನಗರದಲ್ಲಿ ಉದ್ಯಾನವನಗಳ ನಿರ್ಮಾಣ

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)** –

೨೪೦ (೪೮೦) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದಲ್ಲಿರುವ ಉದ್ಯಾನವನಗಳೆಷ್ಟು ; ಅವುಗಳಲ್ಲಿ ಗುಣಮಟ್ಟದ ಉದ್ಯಾನವನಗಳು ಯಾವುವು ; (ವಿವರ ನೀಡುವುದು)

(ಆ) ರಾಜ್ಯದ ಉತ್ತಮ ನಗರಗಳಲ್ಲಿ ಒಂದಾಗಿರುವ ಬೆಳಗಾವಿ ನಗರದಲ್ಲಿ ಅತ್ಯುತ್ತಮ ದರ್ಜೆಯ ಉದ್ಯಾನವನಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಉತ್ತಮ ಉದ್ಯಾನವನಗಳನ್ನು ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಕೊಳ್ಳುವುದೇ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಮಹಿಳಾ ಪೌರ ಕಾರ್ಮಿಕರು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)** –

೨೪೧ (೫೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ಪುರುಷ

ಮತ್ತು ಮಹಿಳೆಯರ ವಿವರಗಳನ್ನು ಪ್ರತ್ಯೇಕವಾಗಿ ವಲಯವಾರು ನೀಡುವುದು)

(ಆ) ಈ ಪೌರ ಕಾರ್ಮಿಕರನ್ನು ಪೂರೈಸಿರುವ ಎಷ್ಟು ಗುತ್ತಿಗೆದಾರರ ಜೊತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಲೇಬರ್ ಕಂಟ್ರಾಕ್ಟ್ ಕರಾರು ಒಪ್ಪಂದ ಮಾಡಿಕೊಂಡಿದೆ ; (ಗುತ್ತಿಗೆದಾರರ ವಿವರಗಳನ್ನು ವಲಯವಾರು ನೀಡುವುದು)

(ಇ) ಬಿಬಿಎಂಪಿ ವತಿಯಿಂದ ಪಡೆದ ಪ್ರಮಾಣದಷ್ಟು ವೇತನ ನೀಡದೆ ಮತ್ತು ಇ.ಎಸ್.ಐ, ಪಿಎಫ್ ಇತ್ಯಾದಿ ಹಣವನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಪಾವತಿಸದೆ ಗುತ್ತಿಗೆದಾರರು ವಂಚಿಸುತ್ತಿದ್ದಾರೆಂಬ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ ವಂಚನೆ ಮಾಡಿರುವ ಗುತ್ತಿಗೆದಾರರು ಯಾರು ಸದರಿ ಗುತ್ತಿಗೆದಾರರ ವಿರುದ್ಧ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿನ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೨ (೫೧) ಕಾನೂನು, ಸಂಸದೀಯ, ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ ಯಾವ ಯಾವ ದೇವಸ್ಥಾನಗಳ ವ್ಯವಸ್ಥಾಪಕ ಮಂಡಳಿಗಳ ಅವಧಿಯು ಯಾವಾಗ ಮುಕ್ತಾಯಗೊಳ್ಳುತ್ತವೆ ; (ಎ.ಬಿ.ಸಿ. ದೇವಸ್ಥಾನದವರು ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ ದೇವಾಸ್ಥಾನಗಳಲ್ಲಿ ಆಡಳಿತಾಧಿಕಾರಿಗಳನ್ನು ನೇಮಿಸಲ್ಪಟ್ಟ ದೇವಸ್ಥಾನಗಳು ಯಾವುವು ? (ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನಗಳಿಗೆ ಮಂಜೂರಾತಿಯಾದ ಕಾರ್ಯ ನಿರ್ವಹಣಾಧಿಕಾರಿಗಳು ಎಷ್ಟು ; ಕೊರತೆ ಇರುವ ಕಾರ್ಯ ನಿರ್ವಹಣಾಧಿಕಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಈ) ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ನೌಕರರು ಸಲ್ಲಿಸಿದ ದೂರುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೩ (೫೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ನೌಕರರು ವಿವಿಧ ಪೊಲೀಸ್ ಠಾಣೆಗಳಿಗೆ ಸಲ್ಲಿಸಿದ ದೂರುಗಳ ಸಂಖ್ಯೆ ಎಷ್ಟು ; (ವರ್ಷವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ನೌಕರರ ಮೇಲೆ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೊರ ರಾಜ್ಯದವರ ಮೇಲೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು, ಠಾಣಾವಾರು ಪ್ರಕರಣವಾರು ವಿವರ ನೀಡುವುದು)

(ಈ) ಉಡುಪಿ ಜಿಲ್ಲೆಗೆ ಬೇರೆ, ಬೇರೆ ಉದ್ದೇಶಗಳಿಗಾಗಿ ಹೊರ ರಾಜ್ಯದಿಂದ ಬಂದ ಕಾರ್ಮಿಕರ ಅಕ್ರಮ ಚಟುವಟಿಕೆಗಳನ್ನು ಹಾಗೂ ಅಪರಾಧಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಉಡುಪಿ ಜಿಲ್ಲೆಯಲ್ಲಿ ಗಣಿಗಾರಿಕೆಯಿಂದಾಗಿರುವ ಹೊಂಡಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೪ (೫೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಪರವಾನಿಗೆಯೊಂದಿಗೆ ಮತ್ತು ಪರವಾನಿಗೆ ರಹಿತವಾಗಿ ಗಣಿಗಾರಿಕೆಗಳಿಂದಾಗಿರತಕ್ಕಂತಹ ಹೊಂಡಗಳನ್ನು ಮುಚ್ಚಿಸುವ ಹೊಣೆ ಮತ್ತು ಜವಾಬ್ದಾರಿ ಯಾವ ಇಲಾಖೆಗೆ ಸೇರಿರುತ್ತದೆ ;

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೊಂಡಗಳಲ್ಲಿ ಬಿದ್ದು ಮರಣ ಹೊಂದಿದ ಮಕ್ಕಳ ಸಂಖ್ಯೆ ಎಷ್ಟು ; (ಗ್ರಾಮಾವಾರು, ತಾಲ್ಲೂಕುವಾರು, ಪ್ರಕರಣವಾರು ವಿವರ ನೀಡುವುದು)

(ಇ) ಗಣಿಗಾರಿಕೆಯ ಪರವಾನಿಗೆ ನೀಡುವ ಪೂರ್ವ ಪರವಾನಿಗೆದಾರರಿಂದ ಮುಂಗಡ ಹಣವನ್ನು ಪಡೆದು ಹೊಂಡ ಮುಚ್ಚಿದನಂತರ ಪಾವತಿಸುವ ಚಿಂತನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಪರವಾನಿಗೆ ನೀಡಿದ ಅಧಿಕಾರಿಗಳನ್ನು ಹೊಣೆ ಮಾಡಲಾಗುವುದೇ ?

## ಕುಂದಾಪುರ ತಾಲ್ಲೂಕಿನ ಅತೀ ಹೆಚ್ಚು ಮಾರಾಟ ಮಾಡುವ ಮದ್ಯದಂಗಡಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೫ (೫೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ತಾಲ್ಲೂಕಿನಲ್ಲಿ ಅತೀ ಹೆಚ್ಚ ಮದ್ಯ ಮಾರಾಟ ಮಾಡುವ ಹತ್ತು (TOP TEN) ವೈನ್ ಷಾಪ್ ಮತ್ತು ಬಾರ್ ಅಂಡ್ ರೆಸ್ಟೋರೆಂಟ್‌ಗಳು ಯಾವುವು ; (ಗುತ್ತಿಗೆದಾರರ ಹೆಸರು ಮತ್ತು ವಿಳಾಸದೊಂದಿಗೆ ವಿವರ ನೀಡುವುದು)

(ಆ) ಗೂಡಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟವನ್ನು ನಿಯಂತ್ರಿಸಲು ಕರ್ನಾಟಕ ಪಾನೀಯ ನಿಗಮದಿಂದ ಎಂ.ಎಸ್.ಐ.ಎಲ್ ಮುಖಾಂತರ ಜಿಲ್ಲಾ ಪಂಚಾಯತ್ ವ್ಯಾಪ್ತಿಗೊಂದರಂತೆ ಎಂ.ಎಸ್.ಐ.ಎಲ್ ಅಂಗಡಿ ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಗ್ರಾಮಾಂತರ ಪ್ರದೇಶದ ಬಾರ್ ಅಂಡ್ ರೆಸ್ಟೋರೆಂಟ್ ಮತ್ತು ವೈನ್ ಶಾಪ್‌ಗಳಲ್ಲಿ ಸಿ.ಸಿ.ಟಿ.ವಿ ಅಳವಡಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ರೇಷ್ಮೆ ಇಲಾಖೆ ವತಿಯಿಂದ ಎಸ್‌ಸಿ/ಎಸ್‌ಟಿಯವರಿಗೆ ನೀಡಿರುವ ಸೌಲಭ್ಯ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೬ (೧೯೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ರೇಷ್ಮೆ ಇಲಾಖೆ ವತಿಯಿಂದ ನೀಡುತ್ತಿರುವ ಸೌಲಭ್ಯಗಳು ಯಾವುವು ;

(ಆ) ಮೇಲ್ಕಂಡ ವರ್ಗದವರಿಗಾಗಿ ಸರ್ಕಾರವು ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಸಬ್ಸಿಡಿ ಹಣ ನೀಡುತ್ತಿದೆ ;

(ಇ) ೨೦೧೪–೧೫ ರಲ್ಲಿ ವಿಶೇಷ ಘಟಕ ಯೋಜನೆ (S.C.P ಮತ್ತು T.S.P) ಅಡಿಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರಿಗೆ ಸರ್ಕಾರ ಮೀಸಲಿಟ್ಟ ಹಣ ಎಷ್ಟು ; ಖರ್ಚು ಮಾಡಲಾದ ಹಣ ಎಷ್ಟು ; ಖರ್ಚು ಮಾಡದೆ ಉಳಿದ ಹಣ ಎಷ್ಟು ;

(ಈ) ಯಾವ ಯಾವ ಜಿಲ್ಲೆಗಳಿಗೆ ವಿಶೇಷ ಘಟಕ ಯೋಜನೆ (S.C.P ಮತ್ತು T.S.P) ಅಡಿಯಲ್ಲಿ ಎಷ್ಟೆಷ್ಟು ಹಣ ನೀಡಲಾಗಿದೆ ?

## ತೋಟಗಾರಿಕೆ ಇಲಾಖೆ ವತಿಯಿಂದ ಎಸ್‌ಸಿ/ಎಸ್‌ಟಿ ಯುವರಿಗೆ ನೀಡಿರುವ ಸೌಲಭ್ಯದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೭ (೧೯೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ತೋಟಗಾರಿಕೆ ಇಲಾಖೆ ವತಿಯಿಂದ ನೀಡುತ್ತಿರುವ ಸೌಲಭ್ಯಗಳು ಯಾವುವು ;

(ಆ) ಮೇಲ್ಕಂಡ ವರ್ಗದವರಿಗಾಗಿ ಸರ್ಕಾರದಿಂದ ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣ ಸಬ್ಸಿಡಿ ನೀಡಲಾಗುತ್ತಿದೆ ;

(ಇ) ೨೦೧೪–೧೫ ರಲ್ಲಿ ವಿಶೇಷ ಘಟಕ ಯೋಜನೆ (S.C.P ಮತ್ತು T.S.P) ಅಡಿಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರಿಗೆ ಸರ್ಕಾರ ಮೀಸಲಿಟ್ಟ ಹಣ ಎಷ್ಟು ; ಖರ್ಚು ಮಾಡಲಾದ ಹಣ ಎಷ್ಟು ; ಖರ್ಚು ಮಾಡದೆ ಉಳಿದ ಹಣ ಎಷ್ಟು ;

(ಈ) ಯಾವ ಯಾವ ಜಿಲ್ಲೆಗಳಿಗೆ ವಿಶೇಷ ಘಟಕ ಯೋಜನೆ (S.C.P ಮತ್ತು T.S.P) ಅಡಿಯಲ್ಲಿ ಎಷ್ಟೆಷ್ಟು ಹಣ ನೀಡಲಾಗಿದೆ ?

## ಕಲಬುರಗಿ ನಗರ ಸಭೆಯ ಪೌರ ಕಾರ್ಮಿಕರ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೮ (೧೯೫) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರ ಪಾಲಿಕೆಯಲ್ಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರ ಒಟ್ಟು ಸಂಖ್ಯೆ ಎಷ್ಟು ;

(ಆ) ಇವರಿಗೆ ನೀಡಲಾಗುತ್ತಿರುವ ಮಾಸಿಕ ಭತ್ಯೆ ಎಷ್ಟು ; ಕಳೆದ ಎಷ್ಟು ವರ್ಷಗಳಿಂದ ಈ ನೌಕರರಿಗೆ ಮಾಸಿಕವೇತನ ನೀಡಿರುವುದಿಲ್ಲ ; ಇದಕ್ಕೆ ಕಾರಣ ಏನು ;

(ಇ) ಬಾಕಿ ಇರುವ ಈ ವೇತನವನ್ನು ಶೀಘ್ರದಲ್ಲಿ ಪಾವತಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಕಲ್ಲುಗಣಿಗಾರಿಕೆಯಲ್ಲಿ SC/ST ಯವರಿಗೆ ಮೀಸಲಾತಿ ನೀಡಲಾಗಿರುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೯ (೪೯೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಲುಗಣಿಗಾರಿಕೆಯಲ್ಲಿ ಇದುವರೆವಿಗೆ ಮಂಜೂರಾಗಿರುವ ಪರವಾನಗಿಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಿರುವ ಪರವಾನಗಿಗಳೆಷ್ಟು ; ಎಲ್ಲೆಲ್ಲಿ ನೀಡಲಾಗಿದೆ ? (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

## "ಅಮೃತ" ಯೋಜನೆ ಕಾರ್ಯಕ್ರಮದ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೦ (೪೭೮) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶು ಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಪಶು ಸಂಗೋಪನಾ ಇಲಾಖೆಯ ವತಿಯಿಂದ ಜಾರಿಗೆ ತಂದಿದ್ದ "ಅಮೃತ" ಯೋಜನೆ ಜಾರಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ ಈ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ನೀಡಲಾಗಿದೆ ; ಎಷ್ಟು ಹಣ ಖರ್ಚಾಗಿದೆ ; ಒಟ್ಟು ಮೀಸಲಿಟ್ಟ ಹಣ ಎಷ್ಟು ? (ಜಿಲ್ಲಾವಾರು, ಫಲಾನುಭವಿವಾರು ವಿವರ ನೀಡುವುದು)

## ಬೃ.ಬೆಂ.ಮ.ಪಾ ಕಾಮಗಾರಿಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೧ (೧೯೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ೬೯ನೇ ವಾರ್ಡ್ ಬಸ್ ನಿಲ್ದಾಣದ ಹಿಂಭಾಗ ರಕ್ಕಸಿಹಳ್ಳಕ್ಕೆ ಮಳೆ ನೀರು ಕಾಲುವೆ ನಿರ್ಮಿಸಲು ಕಳೆದ ವರ್ಷ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಆ) ಸದರಿ ಕಾಮಗಾರಿಗೆ ಯಾವ ಯಾವ ದಿನಾಂಕಗಳಂದು ಆಡಳಿತಾತ್ಮಕ ಹಾಗೂ ತಾಂತ್ರಿಕ ಅನುಮೋದನೆ ನೀಡಲಾಗಿದೆ ; ಅನುಮೋದನೆ ಪ್ರತಿಗಳನ್ನು ಒದಗಿಸುವುದು ;

(ಇ) ಮೇಲ್ಕಂಡ ಕಾಮಗಾರಿಯನ್ನು ಯಾವ ಆರ್ಥಿಕ ವರ್ಷದಲ್ಲಿ ಕೈಗೊಳ್ಳಲಾಗುವುದು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಖ್ಯ ಅಭಿಯಂತರರು ಹಾಗೂ ಮೇಲ್ಪಟ್ಟ ಅಧಿಕಾರಿಗಳು ನಿರ್ಲಕ್ಷತೆಯಿಂದ ಸದರಿ ಕಾಮಗಾರಿಯನ್ನು ಈವರೆಗೂ ಕೈಗೊಳ್ಳದಿರುವ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಉ) ಮೇಲ್ಕಂಡ ಕಾಮಗಾರಿಗೆ ಸಂಬಂಧಿಸಿದ ಅಧಿಕಾರಿಗಳು ಯಾರು ಯಾರು ? (ಪೂರ್ಣ ವಿವರ ಒದಗಿಸುವುದು)

## ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ಸರಗಳ್ಳತನ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೨ (೪೫೪) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಒಂದೇ ದಿನ ೧೦ ಕಡೆ ಸರಗಳ್ಳತನ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರಗಳ್ಳತನ ತಡೆಯಲು ಪೊಲೀಸ್ ಇಲಾಖೆ ಕೈಗೊಂಡ ಕ್ರಮಗಳೇನು ?

## ಸಿಮೆಂಟ್ ದರದಲ್ಲಿ ಗೋಲ್ ಮಾಲ್

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೩ (೪೬೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಸಿಮೆಂಟ್ ನಮ್ಮ ರಾಜ್ಯದಲ್ಲಿ ರೂ. ೩೮೦ ರಿಂದ ೪೧೦ ದರವಿದ್ದು, ಅದೇ ಸಿಮೆಂಟ್ ಹೊರ ರಾಜ್ಯಗಳಲ್ಲಿ ರೂ. ೨೮೦ ರಿಂದ ೩೦೦ ದರದಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯ ತಾರತಮ್ಯಕ್ಕೆ ಕಾರಣಗಳೇನು ; ಹಾಗೂ ಆ ಅವ್ಯವಹಾರಕ್ಕೆ ಜವಾಬ್ದಾರರು ಯಾರು ಯಾರು ;

(ಆ) ಬಂದಿದ್ದಲ್ಲಿ, ಹೆಚ್ಚುತ್ತಿರುವ ಸಿಮೆಂಟ್ ಬೆಲೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು)

## ರಾಜ್ಯಕ್ಕೆ ಹೊರ ರಾಜ್ಯದಿಂದ ಖಾಸಗಿ ಹಾಲು ಸರಬರಾಜು ಆಗುತ್ತಿರುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೪ (೪೫೩) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶು ಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊರ ರಾಜ್ಯದಿಂದ ರಾಜ್ಯಕ್ಕೆ ಖಾಸಗಿ ಹಾಲು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರತಿ ದಿನ ರಾಜ್ಯಕ್ಕೆ ಎಷ್ಟು ಲೀಟರ್ ಹಾಲು ಬರುತ್ತಿದೆ ;

(ಇ) ಹೊರ ರಾಜ್ಯದಿಂದ ಬರುವ ಹಾಲನ್ನು ತಡೆಗಟ್ಟಿ, ಮಾರಾಟಕ್ಕೆ ಕಡಿವಾಣ ಹಾಕಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಜ್ಯೋತಿ ಸಂಜೀವಿನಿ ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೫ (೪೪೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಸರ್ಕಾರಿ ನೌಕರರಿಗಾಗಿ ರೂಪಿಸಿರುವ 'ಜ್ಯೋತಿ ಸಂಜೀವಿನಿ' ಯೋಜನೆಯನ್ನು ಸೇವೆ ಸಲ್ಲಿಸುತ್ತಿರುವ ಸರ್ಕಾರಿ ನೌಕರರಿಗೆ ಜಾರಿಯಾಗದೆ ನೌಕರರು ತಮ್ಮ ವೈದ್ಯಕೀಯ ಬಿಲ್ಲುಗಳ ಮರುಪಾವತಿಗಾಗಿ ಹಿರಿಯ ಅಧಿಕಾರಿಗಳ ಕಛೇರಿಗೆ ಓಡಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಂಡ್ಯ ಜಿಲ್ಲೆಯಲ್ಲಿನ ಸರ್ಕಾರಿ ನೌಕರರಿಗೆ ಈ ಯೋಜನೆಯ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ;

(ಇ) ಈ ಯೋಜನೆಯಡಿ ಬರುವ ನೌಕರರ ಅವಲಂಬಿತರು ಯಾರು ಯಾರು ; ಇವರು ನೌಕರರ ಜೊತೆ ವಾಸಿಸದೇ ತಮ್ಮ ಸ್ವಗ್ರಾಮದಲ್ಲಿ ವಾಸಿಸುತ್ತಿದ್ದರೆ ಅವರಿಗೆ ಈ ಸೌಲಭ್ಯ ದೊರೆಯುವುದಿಲ್ಲವೇ ; ಇಲ್ಲದಿದ್ದಲ್ಲಿ ಯಾವ ನಿಯಮದ ಪ್ರಕಾರ ? (ಪೂರ್ಣ ಮಾಹಿತಿ ಒದಗಿಸುವುದು)

## ಅನುಕಂಪ ಆಧಾರದ ಮೇಲೆ ನೌಕರಿ ನೀಡುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೬ (೪೬೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರಕಾರಿ ನೌಕರರು ಆಕಸ್ಮಿಕ ಮರಣ ಹೊಂದಿದ್ದರೆ ಅವರ ಕುಟುಂಬ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ನೌಕರಿ ಕೊಡುತ್ತಿರುವುದು ಸರಿಯಷ್ಟೆ ;

(ಆ) ಮರಣ ಹೊಂದಿದ ಎಷ್ಟು ವರ್ಷದೊಳಗೆ ಅರ್ಜಿ ಸಲ್ಲಿಸಬೇಕು ;

(ಇ) ರಾಜ್ಯದ ಯಾವುದೇ ಇಲಾಖೆಯ ನೌಕರರು ಮರಣ ಹೊಂದಿದ್ದರೂ ಅವರ ಕುಟುಂಬದವರಿಗೆ ಅನುಕಂಪದ ಆಧಾರದ ಮೇಲೆ ನೌಕರಿ ನೀಡಲಾಗುತ್ತಿದೆಯೇ ; ನೀಡಲಾಗುತ್ತಿದ್ದಲ್ಲಿ ಯಾವ ಇಲಾಖೆಯಲ್ಲಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಅನುಕಂಪದ ಆಧಾರದ ಮೇಲೆ ನೌಕರಿ ಪಡೆಯಲು ಇರುವ ಮಾನದಂಡಗಳೇನು ? (ವಿವರ ಒದಗಿಸುವುದು)

**ಸರ್ಕಾರಿ ಸೇವೆಯಲ್ಲಿ ಅನುಕಂಪದ ಆಧಾರದ ಮೇಲೆ ಉದ್ಯೋಗ**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೭ (೪೬೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರಕಾರಿ ಸೇವೆಯಲ್ಲಿ ಇರುವ ಒಟ್ಟು ಎಷ್ಟು ಅಧಿಕಾರಿ/ನೌಕರರು ಆಕಸ್ಮಿಕವಾಗಿ ಸಾವಿಗೀಡಾಗಿದ್ದಾರೆ ; (ಇಲಾಖಾವಾರು/ನಿಗಮ/ಮಂಡಳಿವಾರು ಹೆಸರು ಸಹಿತ ಮಾಹಿತಿ ಒದಗಿಸುವುದು)

(ಆ) ಎಷ್ಟು ಜನರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲಾಗಿದೆ ; ಉಳಿದವರಿಗೆ ಎಷ್ಟು ದಿನದಲ್ಲಿ ಉದ್ಯೋಗ ಒದಗಿಸಲಾಗುವುದು ? (ಇಲಾಖಾವಾರು/ನಿಗಮ/ಮಂಡಳಿವಾರು ಮಾಹಿತಿ ಸಹಿತ ವಿವರ ಒದಗಿಸುವುದು)

**೨೦೧೨–೧೩ ರಿಂದ ೨೦೧೪–೧೫ನೇ ಸಾಲಿನ ಅಮೃತ ಯೋಜನೆ**

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೨೫೮ (೫೩೯) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨೦೧೨–೧೩ನೇ ಸಾಲಿನಿಂದ ೨೦೧೪–೧೫ನೇ ಸಾಲಿನವರೆಗೆ ಅಮೃತ ಯೋಜನೆಯಡಿಯಲ್ಲಿ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ

ಎಷ್ಟು ಜನ ಫಲಾನುಭವಿಗಳಿಗೆ ಹಸು ಮತ್ತು ಎಮ್ಮೆಯನ್ನು ಕೊಂಡುಕೊಳ್ಳಲು ಯಾರ್ಯಾರಿಗೆ ಎಷ್ಟೆಷ್ಟು ಮೊತ್ತದ ಸಹಾಯಧನವನ್ನು ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಹಾಯ ಧನವನ್ನು ಕೋರಿ ಬಂದ ಪ್ರಸ್ತಾವನೆಗಳೆಷ್ಟು ; ಹಾಗೂ ಮಂಜೂರು ಮಾಡಿದ ಸಹಾಯ ಧನವೆಷ್ಟು ಪೂರ್ಣ ಮಾಹಿತಿ ನೀಡುವುದು ;

## ರಸ್ತೆ ಅಪಘಾತಗಳನ್ನು ತಡೆಗಟ್ಟುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೯ (೪೭೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ತಾಲ್ಲೂಕು ಶಿಗ್ಗಾವಿ, ಬಂಕಾಪುರ, ತವರಮೆಳ್ಳಿ ಹೆದ್ದಾರಿ ಪಕ್ಕದಲ್ಲಿರುವ ಪೆಟ್ರೋಲ್ ಬಂಕ್‌ಗೆ ಹೋಗುವಾಗ ಕಳೆದ ೩ ವರ್ಷದಲ್ಲಿ ಆಗಿರುವ ಅಪಘಾತಗಳ ಸಂಖ್ಯೆ ಎಷ್ಟು ; ಸದರಿ ಅಪಘಾತದಲ್ಲಿ ಸತ್ತವರ ಸಂಖ್ಯೆ ಎಷ್ಟು ಗಾಯಗೊಂಡಿರುವ ಸಂಖ್ಯೆ ಹಾಗೂ ವರ್ಷವಾರು ವಿವರ ನೀಡುವುದು (ಕಳೆದ ಮೂರು ವರ್ಷಗಳ ಮಾಹಿತಿಯನ್ನು ಒದಗಿಸುವುದು)

(ಆ) ರಂಭಾಪುರಿ ಕಾಲೇಜಿನಿಂದ ಕುರ್ಸಾಪುರ ಕ್ರಾಸ್ ಹಳ್ಳಿಕೇರಿ ಬಸವಣ್ಣನ ದೇವಸ್ಥಾನದಿಂದ ನಂದಿಹಳ್ಳಿ ಕ್ರಾಸ್, ತವರಮೆಳ್ಳಿಯಿಂದ ಕುಣಿಮೆಳ್ಳಳ್ಳಿ ಕ್ರಾಸ್‌ವರೆಗೆ ಹಾಗೂ ರಾಮನಕೊಪ್ಪದಿಂದ ಅಂಡರ್ ಬ್ರಿಜ್‌ವರೆಗೆ ಅಪಘಾತವಲಯವೆಂದು ಗುರುತಿಸಲ್ಪಟ್ಟಿದ್ದರೂ ಯಾವುದೇ ಮುಂಜಾಗ್ರತಾ ಕ್ರಮಗಳು ಕೈಗೊಳ್ಳದಿರಲು ಕಾರಣವೇನು ; ಈ ನಿಟ್ಟಿನಲ್ಲಿ ಅಪಘಾತಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾವೇರಿ ಜಿಲ್ಲೆಯ ನಗರೋತ್ಥಾನ ಯೋಜನೆ

**ಶ್ರೀ ಸೋಮಣ್ಣ ಎಂ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೦ (೪೫೦) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಗೆ ನಗರೋತ್ಥಾನ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಅನುದಾನವೆಷ್ಟು ; ಈ ಕಾಮಗಾರಿಗಳ ಅನುಷ್ಠಾನಕ್ಕೆ ಯಾವ ಗುತ್ತಿಗೆ / ಏಜೆನ್ಸಿಯನ್ನು ನೇಮಕ ಮಾಡಲಾಗಿದೆ ;

(ಆ) ಗುತ್ತಿಗೆ ಕರಾರಿನನ್ವಯ ಕಾಮಗಾರಿಗಳನ್ನು ಮುಕ್ತಾಯಗೊಳಿಸಲು ದಿನಾಂಕ ನಿಗದಿಪಡಿಸಲಾಗಿದೆಯೇ ದಿನಾಂಕ ಯಾವುದು ; (ಕಾಮಗಾರಿವಾರು ಮಾಹಿತಿ ಒದಗಿಸುವುದು)

(ಇ) ಪ್ರಸ್ತುತ ಕಾಮಗಾರಿಗಳ ಪ್ರಗತಿಕಾರ್ಯ ಯಾವ ಹಂತದಲ್ಲಿವೆ ; ಅಪೂರ್ಣಗೊಂಡ ಕಾಮಗಾರಿಗಳು ಯಾವುವು ಕಾಮಗಾರಿ ಅಪೂರ್ಣಗೊಳ್ಳಲು ಕಾರಣವೇನು ? (ತಾಲ್ಲೂಕುವಾರು, ನಗರಸಭೆ, ಪುರಸಭೆ ಪಟ್ಟಣ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

## ಟ್ಯಾಕ್ಸಿ ಮತ್ತು ಆಟೋಗಳ ನಿಲುಗಡೆಗೆ ಅಧಿಕೃತ ನಿಲುಗಡೆ ತಾಣವನ್ನು ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೧ (೪೬೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಟ್ಯಾಕ್ಸಿ ಮತ್ತು ಆಟೋ ವಾಹನಗಳ ನಿಲುಗಡೆಗೆ ಅಧಿಕೃತ ನಿಲುಗಡೆ ತಾಣವನ್ನು ನಿರ್ಮಾಣ ಮಾಡಲಾಗಿದೆಯೇ ;

(ಆ) ಹಾಗಿದ್ದರೆ, ಅಂತಹ ಎಷ್ಟು ನಿಲುಗಡೆ ತಾಣಗಳು ಎಷ್ಟು ಯಾವುವು ? (ದೂರವಾಣಿ ಸಂಖ್ಯೆ ಸಹಿತ ಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳಪೆ ಗುಣಮಟ್ಟದ ಕಾಮಗಾರಿಗಳು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೨ (೪೫೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ನಡೆದಿರುವುದು ಮತ್ತು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಂತಹ ಕಾಮಗಾರಿಗಳ ಸಂಖ್ಯೆ ಎಷ್ಟು ; ಎಷ್ಟು ಕಾಮಗಾರಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ ; ಅದರಲ್ಲಿ ಎಷ್ಟು ಕಳಪೆ ಕಾಮಗಾರಿಗಳಾಗಿವೆ ; ಕಳಪೆ ಕಾಮಗಾರಿಗೆ ಹೊಣೆಗಾರರು ಯಾರು ;

(ಇ) ಕಳಪೆ ಕಾಮಗಾರಿಗಳು ನಡೆದಿದ್ದಲ್ಲಿ, ಕಳಪೆ ಕಾಮಗಾರಿಯೆಂದು ಪತ್ತೆ ಮಾಡುವವರು ಯಾರು ಯಾರು ; ಪೂರ್ಣ ಮಾಹಿತಿ ಒದಗಿಸುವುದು ; ಕಳಪೆ ಕಾಮಗಾರಿ ಮಾಡಿದ ಗುತ್ತಿಗೆದಾರರು ಮತ್ತು ಅಧಿಕಾರಿಗಳು ಯಾರು ಯಾರು ; ಅವರ ವಿರುದ್ಧ ತೆಗೆದುಕೊಂಡಿರುವ ಕ್ರಮವೇನು ; ಕಳಪೆ ಕಾಮಗಾರಿಯನ್ನು ಗುಣಮಟ್ಟಕ್ಕೆ ಸರಿಮಾಡಲು ತಗಲುವ ವೆಚ್ಚವೆಷ್ಟು ;

(ಈ) ಈ ಕಳಪೆ ಕಾಮಗಾರಿಯ ನಷ್ಟವನ್ನು ಗುತ್ತಿಗೆದಾರರಿಂದ ಮತ್ತು ಅಧಿಕಾರಿಗಳಿಂದ ವಸೂಲಿ ಮಾಡಲು ಸರ್ಕಾರ ಕ್ರಮ ಜರುಗಿಸಿದೆಯೇ ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೂರ್ಣಗೊಂಡ ಕಾಮಗಾರಿಗಳಿಗೆ ಹಣ ಪಾವತಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೩ (೪೬೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೂರ್ಣಗೊಂಡ ಕಾಮಗಾರಿಗಳಿಗೆ ಡಿಸೆಂಬರ್ ೨೦೧೫ ರೊಳಗಾಗಿ ಪಾವತಿಸಬೇಕಾದ ಹಣ ಬಾಕಿ ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ ಅದರ ಒಟ್ಟು ಮೊತ್ತ ಎಷ್ಟು ; (ಕಾಮಗಾರಿವಾರು ಪಾವತಿಸಬೇಕಾದ ಹಣದ ವಿವರ ಒದಗಿಸುವುದು)

(ಇ) ಹಣ ಪಾವತಿಸಲು ಬಾಕಿ ಇರುವ ಕಾಮಗಾರಿಗಳು ಸ್ಥಾಯಿ ಸಮಿತಿ, ಬಿ.ಬಿ.ಎಂ.ಪಿ. ಸಭೆ ಮತ್ತು ಮಂಜೂರು ಮಾಡುವ ಅಧಿಕಾರವುಳ್ಳವರಿಂದ ಮಂಜೂರಾಗಿದೆಯೇ ;

(ಈ) ಹಾಗಿದ್ದರೆ, ಅಂತಹ ಕಾಮಗಾರಿಯನ್ನು ಜಾರಿಗೊಳಿಸುವಾಗ ಹಣದ ವ್ಯವಸ್ಥೆಗೆ ತಕ್ಕಂತೆ ನಿರ್ವಹಣೆ ಮಾಡಲಾಗಿದೆಯೇ ;

(ಉ) ಗುತ್ತಿಗೆದಾರ ಮತ್ತು ಅಧಿಕಾರಿಗಳು ಜೊತೆಯಾಗಿ ನಡೆಸಿರುವ ಅಕ್ರಮ ಕಾಮಗಾರಿಗಳು ಯಾವುವು ?

## ಬೆಂಗಳೂರಿನಲ್ಲಿ ಮೆಟ್ರೋ ಯೋಜನೆ ವಿಳಂಬ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೪ (೪೫೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ನಮ್ಮ ಮೆಟ್ರೋ ಯೋಜನೆ ಯಾವ ಹಂತದಲ್ಲಿದೆ ; ಸದರಿ ಯೋಜನೆಯ ಪ್ರಗತಿ ಪ್ರತಿ ಹಂತದ ವಿವರಗಳನ್ನು ಒದಗಿಸುವುದು ; ಈಗಾಗಲೇ ಪೂರ್ಣಗೊಂಡಿರುವ ಮಾರ್ಗಗಳು ಯಾವುವು ;

ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು ; ಕಾಮಗಾರಿ ಪೂರ್ಣಗೊಳ್ಳುವ ಹಂತಕ್ಕೆ ಬಂದಿರುವ ಮೆಟ್ರೋ ಮಾರ್ಗಗಳೆಷ್ಟು ;

(ಆ) ಮುಂದುವರೆದ ಕಾಮಗಾರಿಗಳು ಪೂರ್ಣಗೊಳ್ಳಲು ಬೇಕಾಗುವ ಸಮಯಾವಕಾಶ ಎಷ್ಟು ; ಮಾರ್ಗ ಸಂಚರಿಸಲು ತೆಗೆದುಕೊಳ್ಳುವ ಸಮಯವೆಷ್ಟು ;

(ಇ) ಇಂತಹ ಹೊಸ ಮಾರ್ಗಗಳು ಯಾವುವು ; ಎಲ್ಲಿಯವರೆಗೆ ಯೋಜನೆಯನ್ನು ಮುಂದುವರೆಸಲಾಗುವುದು ; ಇದಕ್ಕಾಗಿ ತಗಲುವ ವೆಚ್ಚವೆಷ್ಟು ; ಯೋಜನೆ ಅನುಷ್ಠಾನಕ್ಕೆ ಬೇಕಾದ ಅನುದಾನವನ್ನು ಕಾಯ್ದಿರಿಸಲಾಗಿದೆಯೇ ; ಇದುವರೆಗೂ ಬಳಕೆಯಾದ ಮೊಬಲಗೆಷ್ಟು ; (ವಿವರಗಳನ್ನು ಒದಗಿಸುವುದು)

(ಈ) ಇದರಿಂದಾಗಿ ಬೆಂಗಳೂರಿನಲ್ಲಿ ಎಷ್ಟು ಕಿ.ಮೀ. ವ್ಯಾಪ್ತಿಯ ಎಷ್ಟು ಪ್ರದೇಶಗಳಿಗೆ ಮೆಟ್ರೋ ಸಂಚಾರ ತಲುಪಿದಂತಾಗುತ್ತದೆ ; ಸಂಪೂರ್ಣ ಮುಕ್ತಾಯಗೊಳ್ಳಲು ಬೇಕಾಗುವ ಕಾಲಾವಧಿ ಎಷ್ಟು ;

(ಉ) ಬೆಂಗಳೂರಿನ ರಿಂಗ್ ರಸ್ತೆಯಲ್ಲಿ ಮೆಟ್ರೋ ಕಾಮಗಾರಿ ಪ್ರಾರಂಭಿಸಲು ಈವರೆವಿಗೆ ಕೈಗೊಂಡಿರುವ ಕ್ರಮಗಳೇನು ?

## ೩೭೧ ಜೆ. ಪರಿಚ್ಛೇದದಂತೆ ಹೈದ್ರಾಬಾದ್–ಕರ್ನಾಟಕ ಭಾಗದವರಿಗೆ ನೇಮಕಾತಿ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೫ (೪೬೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುವ ಸಂವಿಧಾನದ ಪರಿಚ್ಛೇಧ ೩೭೧ ಜೆ ಪ್ರಕಾರ ನೇಮಕಾತಿಗಳಲ್ಲಿ ಅವಕಾಶವನ್ನು ಒದಗಿಸಲು ಸರ್ಕಾರ ಬದ್ಧವಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ನಿಯಮ ಜಾರಿಗೆ ಬಂದಂದಿನಿಂದ ಯಾವ ಯಾವ ಇಲಾಖೆಗಳ ಎಷ್ಟು ಹುದ್ದೆಗಳ ನೇಮಕಾತಿಯಲ್ಲಿ ಆ ಭಾಗದ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿದೆ ;

(ಇ) ಇದರ ಪ್ರಯೋಜನ ಪಡೆದವರ ವಿವರಗಳೇನು ; ರಾಜ್ಯದ ಸಿಇಟಿ ಹಾಗೂ ಪರೀಕ್ಷಾ ಪ್ರಾಧಿಕಾರದ ಸ್ಪರ್ಧಾ ಪರೀಕ್ಷೆಗಳಿಗೂ ಅನ್ವಯವಾಗುವುದೇ ; (ಇಲಾಖಾವಾರು ಜಿಲ್ಲಾವಾರು ಮಾಹಿತಿಗಳನ್ನು ನೀಡುವುದು)

(ಈ) ಸದರಿ ನಿಯಮವು ಕೇವಲ ನೇಮಕಾತಿಗಳಿಗೆ ಮಾತ್ರವೆ ಅನ್ವಯವಾಗುವುದೇ ಅಥವಾ ಮುಂಬಡ್ತಿ ಪದೋನ್ನತಿಗೂ ಸಹ ಅನ್ವಯವಾಗುವುದೇ ; ಅದೇ ರೀತಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಸಂದರ್ಭದಲ್ಲಿ ಯಾವ ರೀತಿ ಪರಿಗಣಿಸಲಾಗುತ್ತದೆ ;

(ಉ) ನೇಮಕಾತಿ ವೃಂದದವರಿಗೂ ಈ ಕುರಿತು ಸ್ಪಷ್ಟ ನಿರ್ದೇಶನಗಳಿಲ್ಲದ ಕಾರಣ ಗೊಂದಲಗಳಾಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು ? (ವಿವರ ಒದಗಿಸುವುದು)

## ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೀರಿನ ಕೊರತೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್** (ಶಿಕ್ಷಕರ ಕ್ಷೇತ್ರ) –

೨೬೬ (೪೫೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೀಳುವ ವಾರ್ಷಿಕ ಮಳೆಯ ಪ್ರಮಾಣವೆಷ್ಟು ;

(ಆ) ಸದರಿ ಪ್ರಮಾಣಕ್ಕೆ ಅನುಗುಣವಾಗಿ ವರ್ಷವೊಂದಕ್ಕೆ ಲಭ್ಯವಾಗುವ ನೀರಿನ ಪ್ರಮಾಣವೆಷ್ಟು ; (ಟಿ.ಎಂ.ಸಿ. ಲೆಕ್ಕದಲ್ಲಿ ವಿವರ ನೀಡುವುದು)

(ಇ) ನೀರಿನ ಕೊರತೆಯನ್ನು ಅನುಭವಿಸುತ್ತಿರುವ ಬೆಂಗಳೂರು ನಗರಕ್ಕೆ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಿಗೆ ಈ ನೀರಿನ ಸದ್ಬಳಕೆಯನ್ನು ಮಾಡಲು ಹಾಗೂ ಕೊಳಚೆ ನೀರಿನೊಂದಿಗೆ ಸೇರಿ ವ್ಯರ್ಥವಾಗುವುದನ್ನು ತಡೆಯಲು ಸರ್ಕಾರದ ಮುಂದಿರುವ ಯೋಜನೆಗಳೇನು ? (ವಿವರ ನೀಡುವುದು)

## ನಗರದಲ್ಲಿ ಬೀದಿ ನಾಯಿಗಳ ಹಾವಳಿ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೬೭ (೪೫೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಇತ್ತೀಚೆಗೆ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬೀದಿ ನಾಯಿಗಳ ಹಾವಳಿಯಿಂದ ಸಾರ್ವಜನಿಕ ಪಾರ್ಕ್‌ಗಳಲ್ಲಿ ವಿಹರಿಸುವ ಜನರಿಗೂ ತೊಂದರೆಯುಂಟಾಗಿದ್ದು, ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಬೆಂಗಳೂರು ನಗರದಲ್ಲಿ ಕಳೆದ ೩ ವರ್ಷಗಳ ಅವಧಿಯಲ್ಲಿ ನಾಯಿ ಕಡಿತದಿಂದ ಸಾವನ್ನಪ್ಪಿದ ಜನರ ಸಂಖ್ಯೆ ಎಷ್ಟು ;

(ಈ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಾಯಿ ಕಡಿತದಿಂದ ಚಿಕಿತ್ಸೆ ನೀಡಲು ಔಷಧಿ ಕೊರತೆ ಇದೆಯೇ ; ಇದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕ್ರಿಕೆಟ್ ಬೆಟ್ಟಿಂಗ್ ದಂಧೆ ಕರಾಳ ಛಾಯೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೬೮ (೪೫೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕ್ರಿಕೆಟ್ ಬೆಟ್ಟಿಂಗ್ ದಂಧೆಯ ಕರಾಳ ಛಾಯೆಯು ವ್ಯಾಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಲ್ಲಿ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ಹುಬ್ಬಳ್ಳಿ–ಧಾರವಾಡದಲ್ಲಿ ಸುವರ್ಣ ನ್ಯೂಸ್ ಚಾನಲ್‌ನಲ್ಲಿ ದಿನಾಂಕ ೦೬.೦೬.೨೦೧೫ ರಂದು ಶನಿವಾರದ ಸಂಜೆ ೭.೦೦ ಗಂಟೆಗೆ ಕ್ರಿಕೆಟ್ ಬೆಟ್ಟಿಂಗ್ ದಂಧೆಯ ಸುದ್ದಿ ಬಿತ್ತರಗೊಳ್ಳುತ್ತಿದ್ದಂತೆಯೇ ಕೇಬಲ್ ಮುಖಾಂತರ ಕಾರ್ಯಕ್ರಮ ಸ್ಥಗಿತಗೊಳ್ಳಲು ಕಾರಣವೇನು ;

(ಈ) ಈ ಸ್ಥಗಿತಕ್ಕೆ ಕಾರಣೀಭೂತರಾದವರು ಯಾರು ; ಅವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

**ಹೇಮಾವತಿ ನದಿಗೆ ಕಲುಷಿತ ಚರಂಡಿ ನೀರನ್ನು ಹರಿಸುತ್ತಿರುವ ಬಗ್ಗೆ**

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) –**

೨೬೯ (೪೬೯) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೇಮಾವತಿ ನದಿಯ ತಟದಲ್ಲಿ ಬರುವ ಬಹುತೇಕ ಪುರಸಭೆಗಳು ಮತ್ತು ಹಳ್ಳಿಗಳ ಕಲುಷಿತ ಚರಂಡಿ ನೀರನ್ನು ಸಂಸ್ಕರಣೆ ಮಾಡದೆ ನದಿಗೆ ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಲುಷಿತ ನೀರನ್ನು ನದಿಗಳಿಗೆ ಬಿಡುವುದರ ಸಂಬಂಧ ದಾಖಲಾದ ಪ್ರಕರಣಗಳೆಷ್ಟು? ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು;

(ಇ) ಹೇಮಾವತಿ ತಟದಲ್ಲಿ ಬರುವ ಪುರಸಭೆಗಳ ಒಳಚರಂಡಿ ತ್ಯಾಜ್ಯ ನೀರನ್ನು ಸಂಸ್ಕರಿಸಲು ಸ್ಥಾಪಿಸಿರುವ ಸಂಸ್ಕರಣಾ ಘಟಕಗಳೆಷ್ಟು? ಇವುಗಳ ಪೈಕಿ ಕಾರ್ಯನಿರ್ವಹಿಸುತ್ತಿರುವ ಘಟಕಗಳು ಎಷ್ಟು? (ಘಟಕವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿನ ಕಳ್ಳತನಗಳ ಪ್ರಕರಣಗಳು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೦ (೪೭೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ನಡೆದ ಮನೆಗಳ್ಳತನ ಮತ್ತು ಸರಗಳ್ಳತನ ಹಾಗೂ ದಾಖಲಾದ ಇತರೆ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಇದುವರೆವಿಗೂ ಪತ್ತೆಯಾದ ಮತ್ತು ಪತ್ತೆಯಾಗದೆ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಠಾಣಾವಾರು ಪ್ರಕರಣಗಳ ಮಾಹಿತಿ ಒದಗಿಸುವುದು)

(ಇ) ಇದುವರೆವಿಗೂ ಪತ್ತೆ ಹಚ್ಚಿ ವಾಸಸುದಾರರಿಗೆ/ಮಾಲೀಕರಿಗೆ ಪತ್ತೆ ಮಾಡಲಾದ ವಸ್ತುಗಳನ್ನು ಹಿಂತಿರುಗಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಇದುವರೆವಿಗೂ ಪತ್ತೆ ಹಚ್ಚದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಹಾಗೆ ಕೆಲವು ಪ್ರಕರಣಗಳನ್ನು ಪತ್ತೆ ಹಚ್ಚದೇ ಇರಲು ಕಾರಣಗಳೇನು? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ಪೊಲೀಸ್ ವಸತಿ ಗೃಹಗಳ ದುಸ್ಥಿತಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೧ (೪೭೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಬೀದರ್ ಜಿಲ್ಲೆಯಲ್ಲಿ ಹಾಲಿ ಇರುವ ಪೋಲೀಸ್ ವಸತಿ ಗೃಹಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಪ್ರಸಕ್ತ ಇರುವ ವಸತಿ ಗೃಹಗಳು ವಾಸಿಸಲು ಯೋಗ್ಯವಾಗಿಲ್ಲದಿರುವುದರಿಂದ ಅವುಗಳ ದುರಸ್ಥಿಗಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಈ) ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ಎಷ್ಟೆಷ್ಟು ಹೊಸ ವಸತಿ ಗೃಹಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕಿದೆ ?

## ಭಾರೀ ಮತ್ತು ಮಧ್ಯಮ ಕೈಗಾರಿಕಾ ಯೋಜನೆಗಳು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾಸಭೆಯಿಂದ ಚುನಾಯಿತರಾದವರು)** –

೨೭೨ (೪೭೩) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಭಾರೀ ಮತ್ತು ಮಧ್ಯಮ ಕೈಗಾರಿಕಾ ಇಲಾಖೆ ವತಿಯಿಂದ ಅನುಷ್ಠಾನ ಮಾಡಿದ ಯೋಜನೆಗಳಾವುವು; ಅವುಗಳಿಗೆ ವೆಚ್ಚ ಮಾಡಿದ ಹಣವೆಷ್ಟು; (ಯೋಜನಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ಒದಗಿಸುವುದು)

(ಆ) ಪ್ರಸ್ತುತ ಪ್ರಗತಿಯಲ್ಲಿರುವ ಯೋಜನೆಗಳಾವುವು; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು; (ಯೋಜನಾವಾರು ವಿವರ ಒದಗಿಸುವುದು)

(ಇ) ಹೊಸ ಯೋಜನೆಗಳ ಪ್ರಸ್ತಾವನೆಗಳೇನಾದರೂ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಪ್ರಸ್ತುತ ಯೋಜನೆಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

## ಆರ್.ಐ.ಡಿ.ಎಫ್. ಯೋಜನೆ ಅಡಿಯಲ್ಲಿ ಪಶುವೈದ್ಯಕೀಯ ಕಟ್ಟಡ ನಿರ್ಮಾಣ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾಸಭೆಯಿಂದ ಚುನಾಯಿತರಾದವರು) –**

೨೭೩ (೪೭೦) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ೨೦೧೫–೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಆರ್.ಐ.ಡಿ.ಎಫ್. ಯೋಜನೆಯಡಿಯಲ್ಲಿ ಪಶುವೈದ್ಯಕೀಯ ಕಟ್ಟಡ ನಿರ್ಮಾಣಕ್ಕೆ ಬಿಡುಗಡೆ ಮಾಡಲಾದ ಅನುದಾನ ಎಷ್ಟು;

(ಆ) ಈ ಯೋಜನೆಯಡಿಯಲ್ಲಿ ಪಶುವೈದ್ಯಕೀಯ ಕಟ್ಟಡ ಕಾಮಗಾರಿಗೆ ಇಲಾಖೆಯಿಂದ ಎಷ್ಟು ಪ್ರಸ್ತಾವನೆಗಳು ಬಂದಿವೆ;

(ಇ) ಬೀದರ್ ಜಿಲ್ಲೆಯಲ್ಲಿ ಶಿಥಿಲಗೊಂಡಿರುವ ಹೊಸ ಕಟ್ಟಡಗಳು ಎಷ್ಟು? (ತಾಲ್ಲೂಕುವಾರು, ಕ್ಷೇತ್ರವಾರು ಮಾಹಿತಿ ನೀಡುವುದು)

## ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುವವರ ಅಸೋಸಿಯೇಷನ್ ನೋಂದಣಿ ಕುರಿತು

**ಶ್ರೀ ಎಂ. ಶ್ರೀನಿವಾಸ್ (ವಿಧಾಸಭೆಯಿಂದ ಚುನಾಯಿತರಾದವರು) –**

೨೭೪ (೪೭೬) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಅಪಾರ್ಟ್‌ಮೆಂಟ್‌ಗಳ ಸಂಖ್ಯೆ ಎಷ್ಟು; ಈ ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುತ್ತಿರುವ ನಾಗರೀಕರ ಅಂದಾಜು ಸರ್ಕಾರಕ್ಕೆ ಇದೆಯೇ; (ಹಾಗಿದ್ದಲ್ಲಿ, ವಲಯವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುವ ನಾಗರೀಕರು ರಚಿಸಿಕೊಳ್ಳುವ ತಮ್ಮ ಅಪಾರ್ಟ್‌ಮೆಂಟ್ ಅಸೋಸಿಯೇಷನ್‌ನನ್ನು ಯಾವ ಕಾಯಿದೆಯಡಿ ನೋಂದಣಿ ಮಾಡಲಾಗುತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರವು ಯಾವ ಮಾನದಂಡ, ನಿಯಮಾವಳಿಗಳನ್ನು ಇಂತಹ ಅಸೋಸಿಯೇಷನ್ ನೋಂದಣಿ ವಿಷಯದಲ್ಲಿ ಅನುಸರಿಸುತ್ತಿದೆ; (ಮಾಹಿತಿ ನೀಡುವುದು)

(ಇ) ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸದೆ, ಒಪ್ಪಂದ ಪತ್ರದಲ್ಲಿ ಇರುವಂತಹ ಸೌಲಭ್ಯಗಳನ್ನು ಒದಗಿಸದ, ಆಕರ್ಷಕ ಜಾಹೀರಾತು ನೀಡುತ್ತಾ, ವಿವಾದಿತ ಜಾಗದಲ್ಲಿ ನಿರ್ಮಾಣ ಮಾಡಿ, ಗ್ರಾಹಕರಿಗೆ ವಂಚಿಸುತ್ತಿರುವ ಬಿಲ್ಡರ್‌ಗಳ ಬಗ್ಗೆ ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕಾಯಿದೆರೂಪದ ಕ್ರಮಗಳು ಏನು? (ಮಾಹಿತಿ ಒದಗಿಸುವುದು)

## ಚರಂಡಿಗಳಲ್ಲಿ ಹೂಳು ತೆಗೆಯುವಿಕೆ ನಂತರದಲ್ಲಿ ಮುಂದುವರೆದ ಸಮಸ್ಯೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೫ (೪೭೫) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಬೆಂಗಳೂರು ನಗರದಲ್ಲಿನ ಚರಂಡಿಯಲ್ಲಿ ನೀರು ಸರಾಗವಾಗಿ ಹರಿಯುವ ದೃಷ್ಟಿಯಿಂದ ಹೂಳೆತ್ತುವ ಕಾಮಗಾರಿಯನ್ನು ಎಷ್ಟು ಬಾರಿ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಹೂಳನ್ನು ತೆಗೆಯಲಾಗಿದೆ; ಇದಕ್ಕಾಗಿ ವ್ಯಯಿಸಿದ ಹಣವೆಷ್ಟು; (ವರ್ಷವಾರು, ವಲಯವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಚರಂಡಿಯಲ್ಲಿ ತೆಗೆಯುವ ಹೂಳನ್ನು ಎಲ್ಲಿ ವಿಲೇವಾರಿ ಮಾಡಲಾಗುತ್ತಿದೆ; ಈ ಹೂಳು ಸಾಗಾಣಿಕೆಗಾಗಿ ವಿನಿಯೋಗಿಸಲಾದ ಹಣ ಎಷ್ಟು; ಈ

ಕಾಮಗಾರಿಗಳಲ್ಲಿ ತೊಡಗಿಸಿಕೊಂಡಿರುವ ವ್ಯಕ್ತಿ ಯಾರು ಮತ್ತು ಸಂಸ್ಥೆಗಳು ಯಾವುವು; ಅವುಗಳಿಗೆ ಪಾವತಿಸಲಾದ ಹಣ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಅಧಿಕ ಹಣ ವಿನಿಯೋಗವಾಗುತ್ತಿದ್ದರೂ, ಅಲ್ಪ ಮಳೆಗೂ ರಸ್ತೆಗಳಲ್ಲಿ ನೀರು ನಿಲ್ಲುತ್ತಿರುವ ಚರಂಡಿಗಳಲ್ಲಿ ಸರಾಗವಾಗಿ ನೀರು ಹರಿಯದೇ ಆಗುತ್ತಿರುವ ಅನಾಹುತವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ; ಈ ನಿಟ್ಟಿನಲ್ಲಿ ಗುರುತಿಸಲಾಗದ ಕಾರಣಗಳು ಮತ್ತು ಕೈಗೊಂಡ ಕ್ರಮಗಳು ಏನು? (ಸಂಪೂರ್ಣ ವಿವರ ಒದಗಿಸುವುದು)

## ನೂತನ ಮರಳು ನೀತಿ ಜಾರಿಯಾಗಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** –

೨೭೬ (೪೮೧) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಯಾಗಿರುವ ನೂತನ ಮರಳು ನೀತಿಯಿಂದ ಜನಸಾಮಾನ್ಯರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸಾರ್ವಜನಿಕರಿಗೆ ಮರಳು ಯೋಗ್ಯ ಬೆಲೆಯಲ್ಲಿ ಸಿಗುವ ಕುರಿತು ಸರಕಾರವು ಕೈಕೊಂಡ ಕ್ರಮಗಳೇನು;

(ಇ) ಸರಕಾರದ ಹೊಸ ಮರಳು ನೀತಿಯಿಂದ ಮರಳಿನ ಬೆಲೆ ಗಗನಕ್ಕೆ ಏರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸಾರ್ವಜನಿಕರಿಗೆ ಯೋಗ್ಯ ದರದಲ್ಲಿ ಮರುಳು ದೊರೆಯುವಂತೆ ಮಾಡಲು ಸರ್ಕಾರದ ಕ್ರಮಗಳೇನು?

## ಬಡಾಲ ಅಂಕಲಗಿ ಗ್ರಾಮದ ರೈತ ಗುರುನಾಥ ಚಾಂಪಗಾಂವೆ ಆತ್ಮಹತ್ಯೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) –**

೧೭೭ (೫೬೦) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರಕಾರದ ರೈತರ ವಿರೋಧಿ ನೀತಿಯಿಂದ ಬೆಳಗಾವಿಯಲ್ಲಿ ಬಡಾಲ ಅಂಕಲಗಿ ಗ್ರಾಮದ ರೈತ 'ಗುರುನಾಥ ಚಾಂಪಗಾಂವೆ' ಕಾರ್ಖಾನೆಗೆ ಕಳುಹಿಸಿದ ಕಬ್ಬಿನ ಪತ ವೇಳೆಗೆ ಸರಿಯಾಗಿ ಬರದೆ ಇರುವುದರಿಂದ ಆತ್ಮಹತ್ಯೆ ಮಾಡಿಕೊಂಡಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರೈತನ ಸಾವಿಗೆ ಕಾರಣವೇನು; ಈ ಕುರಿತು ಸರ್ಕಾರ ಏನಾದರೂ ತನಿಖೆ ಕೈಗೊಂಡಿದೆಯೇ;

(ಇ) ಸದರಿ ರೈತ ಹೊಂದಿರುವ ಸ್ವಂತ ಜಮೀನು ಎಷ್ಟು; ಎಷ್ಟು ಎಕರೆ ಕಬ್ಬು ಬೆಳೆದಿದ್ದನು; ಹಾಗೂ ರೈತನಿಗೆ ಕಾರ್ಖಾನೆಯಿಂದ ಬರಬೇಕಾದ ಕಬ್ಬಿನ ಬಿಲ್ಲು ಎಷ್ಟು; ನೇಣಿಗೆ ಶರಣಾದ ರೈತನು ಬ್ಯಾಂಕುಗಳಲ್ಲಿ ಮತ್ತು ಖಾಸಗಿಯಾಗಿ ಪಡೆದ ಸಾಲ ಎಷ್ಟು;

(ಈ) ನೇಣಿಗೆ ಶರಣಾದ ಬಡ ರೈತನ ಕುಟುಂಬಕ್ಕೆ ಸರಕಾರ ಯಾವ ರೀತಿ ಸಹಾಯ ಒದಗಿಸಲು ಮುಂದಾಗಿದೆ ?

## ಕಾರ್ಯಸೌಧ, ಕಾನೂನು ಶಾಖೆ ಮತ್ತು ವಿದ್ಯಾರ್ಥಿ ನಿಲಯಗಳ ಸ್ಥಾಪನೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** –

೨೭೮ (೫೧೧) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಗಳಲ್ಲಿ ಕಾರ್ಯಸೌಧ, ಕಾನೂನು ಶಾಖೆ ಮತ್ತು ವಿದ್ಯಾರ್ಥಿ ನಿಲಯಗಳ ಸ್ಥಾಪನೆಗಾಗಿ ಸರ್ಕಾರ ಯೋಚಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ಭಾಗಗಳಲ್ಲಿ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ; ವಿಶೇಷವಾಗಿ ಬೆಳಗಾವಿ ಜಿಲ್ಲೆಯಲ್ಲಿ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ;

(ಇ) ಕಾರ್ಯಸೌಧ, ಕಾನೂನು ಶಾಖೆ ಮತ್ತು ವಿದ್ಯಾರ್ಥಿ ನಿಲಯಗಳಲ್ಲಿ ಕಾರ್ಯನಿರ್ವಹಿಸಲು ಸಿಬ್ಬಂದಿ ವರ್ಗದವರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ, ಯಾವ ಅನುಪಾತದಡಿಯಲ್ಲಿ ನೇಮಕ ಮಾಡಿಕೊಳ್ಳಲಾಗುತ್ತದೆ; (ವಿವರ ನೀಡುವುದು)

(ಈ) ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ನೇಮಕಾತಿ ಕುರಿತು ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಈ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು)

## CMSMTDP ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** –

೨೭೯ (೫೧೨) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಕೈಗೊಳ್ಳಲು ನಗರೋತ್ಥಾನ CMSMTDP ಯೋಜನೆಯನ್ನು ಜಾರಿಗೊಳಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಈಗಾಗಲೇ ರಾಜ್ಯದ ಯಾವ ಯಾವ ಸ್ಥಳೀಯ ಸಂಸ್ಥೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ; ಬೆಳಗಾವಿ ಜಿಲ್ಲೆಯಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಗಾಗಿ ಸರ್ಕಾರ ಒದಗಿಸಿರುವ ಅನುದಾನ ಎಷ್ಟು; ಬೆಳಗಾವಿ ಜಿಲ್ಲೆಗೆ ಮೀಸಲಿಟ್ಟಿರುವ ಅನುದಾನವೆಷ್ಟು; ಅನುದಾನ ಸದ್ಬಳಕೆಯಾಗಿದೆಯೇ? (ಸಂಪೂರ್ಣ ವಿವರ ನೀಡುವುದು)

## ಆನ್‌ಲೈನ್ ಮೂಲಕ ಖರೀದಿಸುತ್ತಿರುವ ವಸ್ತುಗಳಿಗೆ ತೆರಿಗೆ ವಿಧಿಸುತ್ತಿರುವ ಕುರಿತು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೦ (೪೮೩) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆನ್‌ಲೈನ್ ಮೂಲಕ ಖರೀದಿಸಲಾಗುತ್ತಿರುವ ವಸ್ತುಗಳಿಗೆ ಸರ್ಕಾರ ತೆರಿಗೆ ವಿಧಿಸುತ್ತಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಕಳೆದ ೨ ವರ್ಷಗಳಲ್ಲಿ ಈ ರೀತಿ ಆನ್‌ಲೈನ್‌ನಲ್ಲಿ ವಹಿವಾಟು ನಡೆಸುತ್ತಿರುವ ಕಂಪನಿ/ಸಂಸ್ಥೆಗಳಿಂದ ಸರ್ಕಾರದ ಬೊಕ್ಕಸಕ್ಕೆ ಬಂದ ಆದಾಯವೆಷ್ಟು? (ವರ್ಷವಾರು, ಕಂಪನಿ/ಸಂಸ್ಥೆಗಳವಾರು ಮಾಹಿತಿ ನೀಡುವುದು)

## ಸಾರ್ವಜನಿಕ ಸ್ಥಳಗಳಲ್ಲಿ ಸರಗಳ್ಳತನ ನಡೆಯುತ್ತಿರುವುದು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೧ (೪೮೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಸರಗಳ್ಳತನ, ಆಭರಣಗಳ ಕಳ್ಳತನ, ಮನೆಗಳ್ಳತನ ಹಾಗೂ ರಾಸುಗಳ ಕಳ್ಳತನದ ಎಷ್ಟು ಪ್ರಕರಣಗಳು ದಾಖಲಾಗಿವೆ; ಈ ರೀತಿ ಕಳ್ಳತನವಾದ ಮಾಲುಗಳ ಮೌಲ್ಯವೆಷ್ಟು; (ಜಿಲ್ಲಾವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಈ ರೀತಿ ಕಳುವಾದ ಮಾಲುಗಳಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ಹಾಗೂ ಎಷ್ಟು ಕಳುವಾದ ಮಾಲುಗಳನ್ನು ಮಾಲೀಕರಿಗೆ ವಾಪಸ್ಸು ನೀಡಲಾಗಿದೆ; (ಹೆಸರು, ವಿಳಾಸ ಸಹಿತ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳ್ಳತನ ಕೃತ್ಯದಲ್ಲಿ ಭಾಗಿಯಾದ ಕಳ್ಳರನ್ನು ಹಿಡಿದು ಕಾನೂನಿನ ಪ್ರಕಾರ ಶಿಕ್ಷೆಗೊಳಪಡಿಸಲಾಗಿದೆಯೇ; (ಅವರುಗಳ ಹೆಸರು, ವಿಳಾಸ ಸಹಿತ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಪ್ರಮುಖ ನಗರಗಳಲ್ಲಿ ಸರಗಳ್ಳತನ ಮಾಡುವವರ ಸಂಖ್ಯೆ ಹೆಚ್ಚಾಗಿದ್ದು, ಇವರನ್ನು ಪತ್ತೆ ಹಚ್ಚಲು ಇಲಾಖೆಯು ಯಾವ ರೀತಿಯ ಕಟ್ಟು ನಿಟ್ಟಿನ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಮುಜರಾಯಿ ದೇವಾಲಯಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಂಯ ಸಂಸ್ಥೆಗಳ ಕ್ಷೇತ್ರ) –**

೨೮೨ (೪೮೬) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಗೆ ಒಳಪಡುವ ದೇವಾಲಯಗಳು ಎಷ್ಟು;

(ಆ) ಈ ದೇವಾಲಯಗಳಿಗೆ ಕಳೆದ ೩ ವರ್ಷಗಳಿಂದ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ;

(ಇ) ಈ ದೇವಾಲಯಗಳಿಗೆ ಬರುವ ಭಕ್ತರಿಗೆ ವಸತಿ ಸೌಕರ್ಯಗಳನ್ನು ಒದಗಿಸಲಾಗಿದೆಯೇ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೩ (೪೮೪) ಸಣ್ಣ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಸ್ಥಾಪನೆಯಾಗಿವೆ;

(ಆ) ಕೈಗಾರಿಕೆ ಸ್ಥಾಪನೆಗಾಗಿ ರೈತರಿಂದ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ;

(ಇ) ಈ ಕೈಗಾರಿಕಾ ಸ್ಥಾಪನೆ ಯಾವಾಗ ಪ್ರಾರಂಭವಾಗುವುದು?

## ರಾಯಚೂರು ಜಿಲ್ಲೆಯಲ್ಲಿರುವ ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ವೈನ್ ಶಾಪ್‌ಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೨೮೪ (೪೮೭) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು CL-2 (ವೈನ್ ಶಾಪ್) CL-9 (ಬಾರ್ ಅಂಡ್ ರೆಸ್ಟೋರೆಂಟ್) ಗಳೆಷ್ಟು;

(ಆ) ಇವುಗಳ ಮುಖಾಂತರ ಖರ್ಚಾಗುವ ಮದ್ಯ ಎಷ್ಟು; ಹಾಗೂ ಇದರಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು?

## ಬೆಂಗಳೂರಿನಲ್ಲಿ ಸರಣಿ ಸರಗಳ್ಳತನದ ತನಿಖೆಯ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)** –

೨೮೫ (೪೯೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ದಿನಾಂಕ: ೧೦–೦೬–೨೦೧೫ ರಿಂದ ೧೫–೦೬–೨೦೧೫ ರವರೆಗೆ ಎಷ್ಟು ಸರಗಳ್ಳತನ ಪ್ರಕರಣಗಳು ನಡೆದಿವೆ;

(ಆ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; ಈ ದಿನಗಳಲ್ಲಿ ಮಾಡಿರುವ ಕಳ್ಳರನ್ನು ಬಂಧಿಸಿ ಕದ್ದಿದ್ದ ಸರಗಳನ್ನು ಹಿಂತಿರುಗಿಸಲಾಗಿದೆಯೇ; ಈ ವಸ್ತು ಪ್ರಕರಣಗಳನ್ನು ಬೇದಿಸಲು ವಿಫಲವಾಗಿದೆ; ವಿಫಲವಾಗಿರುವ ಅಧಿಕಾರಿಗಳು ಯಾರು ಯಾರು? (ವಿವರ ನೀಡುವುದು)

## ಬೆಂಗಳೂರಿನ ಬೆಳ್ಳಂದೂರು ಕೆರೆಯ ಮಲಿನತೆ ಮತ್ತು ಶುದ್ಧೀಕರಣದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)** –

೨೮೬ (೪೯೨) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಬೆಳ್ಳಂದೂರು ಕೆರೆಯಲ್ಲಿ ಹಲವಾರು ದಿನಗಳು ಕಂಡು ಬಂದ ನೊರೆ ಹಾಗೂ ಕೆಟ್ಟವಾಸನೆಯ ಕಾರಣ ಮತ್ತು ಅದರ ಪರಿಣಾಮ ಕುರಿತು ಸರ್ಕಾರ ಯೋಚಿಸಿದೆಯೇ;

(ಆ) ಈ ಸಂಬಂಧ ಮಲಿನತೆಯನ್ನು ತಡೆಗಟ್ಟುವಲ್ಲಿ ಯಾವ ರೀತಿಯ ಕ್ರಮ ಕೈಗೋಳ್ಳಲಾಗಿದೆ;

(ಇ) ಕೈಗೊಂಡ ಕ್ರಮದ ನಂತರ ಸದರಿ ಕೆರೆಯ ನೀರನ್ನು ಸುರಕ್ಷತೆಗೆ ಸಂಬಂಧಿಸಿದಂತೆ ಪರಿಶೀಲಿಸಲಾಗಿದೆಯೇ? (ಅದರ ಪರೀಕ್ಷಾ ವರದಿಯ ವಿವರ ನೀಡುವುದು)

## BWSSB ಜಲಾಗಾರಗಳಲ್ಲಿ ಮೊಬೈಲ್ ಟವರ್ ನಿರ್ಮಾಣ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೮೭ (೪೯೦) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ BWSSB ಜಲಾಗಾರಗಳಲ್ಲಿ ಮೊಬೈಲ್ ಟವರ್ ನಿರ್ಮಾಣಕ್ಕೆಂದು ಯಾವುದಾದರೂ ಖಾಸಗಿ ಮೊಬೈಲ್ ಸಂಸ್ಥೆಗೆ ಜಾಗ ನೀಡಲಾಗಿದೆಯೇ;

(ಆ) ನೀಡಲಾಗಿದ್ದಲ್ಲಿ, ಎಷ್ಟು ಕಡೆ ಮತ್ತು ಯಾವ ಕಂಪನಿಗೆ ನೀಡಲಾಗಿದೆ; (ವಿವರ ನೀಡುವುದು)

(ಇ) ಇದಕ್ಕೆ ಸರ್ಕಾರದ ಒಪ್ಪಿಗೆ ಪಡೆಯಲಾಗಿದೆಯೇ; ಒಪ್ಪಿಗೆ ಪಡೆಯುವುದು ಕಡ್ಡಾಯವೇ;

(ಈ) ಈ ಪ್ರಕ್ರಿಯೆಯಲ್ಲಿ ಯಾವುದಾದರೂ ಪ್ರಮಾದ ನಡೆದಿದೆಯೇ; (ವಿವರ ನೀಡುವುದು)

(ಉ) ಪ್ರಮಾದವಾಗಿದ್ದಲ್ಲಿ ಅದನ್ನು ಸರಿಪಡಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ರಾಜ್ಯ ಉಚ್ಚನ್ಯಾಯಾಲಯದಲ್ಲಿ ಖಾಲಿ ಇರುವ ಘನತೆವೆತ್ತ ನ್ಯಾಯಮೂರ್ತಿಗಳ ಹುದ್ದೆಗಳನ್ನು ನೇಮಕ ಮಾಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೮೮ (೪೯೧) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಉಚ್ಚನ್ಯಾಯಾಲಯದಲ್ಲಿ ಒಟ್ಟು ಎಷ್ಟು ಘನತೆವೆತ್ತ ನ್ಯಾಯಮೂರ್ತಿಗಳ ಹುದ್ದೆಗಳು ಭರ್ತಿಯಾಗಬೇಕಿದೆ;

(ಆ) ಸದರಿ ಹುದ್ದೆಗಳು ಎಷ್ಟು ಕಾಲದಿಂದ ಭರ್ತಿಯಾಗದೆ ಉಳಿದಿವೆ ಈರೀತಿ ಉಳಿಯಲು ಕಾರಣವೇನು;

(ಇ) ಈ ವಿಚಾರಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ನ್ಯಾಯಾಂಗ ನೇಮಕ ಆಯೋಗವನ್ನು (NJAC) ಪ್ರಶ್ನಿಸಿ ದಾಖಲಾಗಿರುವ ಅರ್ಜಿಯು ಸುಪ್ರೀಂ ಕೋರ್ಟಿನಲ್ಲಿ ಬಾಕಿ ಇರುವುದು ನಿಜವೇ; (ವಿವರ ನೀಡುವುದು)

(ಈ) ಸದರಿ ಅರ್ಜಿ ವಿಚಾರಣೆ ಇತ್ಯರ್ಥವಾಗುವವರೆಗೂ ಈ ಹಿಂದೆ ಇದ್ದ ಕೊಲಿಜಿಯಂ ವ್ಯವಸ್ಥೆ ಮೂಲಕ ಘನತೆವೆತ್ತ ನ್ಯಾಯಾಮೂರ್ತಿಗಳನ್ನು ನೇಮಕ ಮಾಡಲು ಅವಕಾಶವಿದೆಯೇ;

(ಉ) ಅವಕಾಶವಿದ್ದಲ್ಲಿ, ಹೆಚ್ಚು ವಿಳಂಬ ಮಾಡದೆ ನೇಮಕ ಮಾಡುವ ಕುರಿತು ಸರ್ಕಾರದ ನಿಲುವೇನು?

## ರಾಜ್ಯದಲ್ಲಿ ರೇಷ್ಮೆ ನೂಲು ತೆಗೆಯುವ ತಾಂತ್ರಿಕತೆಯನ್ನು ಉನ್ನತೀಕರಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೮೯ (೪೮೯) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತಯಾರಾಗುವ ರೇಷ್ಮೆ ನೂಲಿಗೂ ಚೀನಾದಿಂದ ಆಮದಾಗುವ ರೇಷ್ಮೆ ನೂಲಿಗೂ ಇರುವ ಪ್ರಮುಖ ವ್ಯತ್ಯಾಸಗಳು ಯಾವುವು;

(ಆ) ಚೀನಾ ರೇಷ್ಮೆಯ ನೂಲು ನಮ್ಮ ರಾಜ್ಯದಲ್ಲಿ ತಯಾರಾಗುವ ನೂಲಿಗಿಂತ ಬಹಳ ತೆಳುವಾಗಿರುವುದು ನಿಜವೇ;

(ಇ) ರಾಜ್ಯದ ರೇಷ್ಮೆ ನೂಲಿಗೆ, ಚೀನಾ ರೇಷ್ಮೆ ನೂಲಿಗಿಂತ ಹೆಚ್ಚು ತೂಕದ ರೇಷ್ಮೆ ಗೂಡಿನ ಅಗತ್ಯವಿರುವುದು ನಿಜವೇ; ನಿಜವಾಗಿದ್ದಲ್ಲಿ ಕಾರಣವೇನು;

(ಈ) ಚೀನಾ ತಾಂತ್ರಿಕತೆಯನ್ನು ಇಲ್ಲಿ ತರಲು ಸಾಧ್ಯವಿಲ್ಲವೇ; ರೇಷ್ಮೆ ನೂಲನ್ನು ತೆಳುವಾಗಿ ತೆಗೆಯಲು ಯಾವ ರೀತಿಯ ತಾಂತ್ರಿಕ ಚಿಂತನೆ ನಡೆಸಲಾಗಿದೆ;

(ಉ) ಇದುವರೆವಿಗೂ ಇದರ ಬಗ್ಗೆ ಚಿಂತನೆ ನಡೆಸಿರದಿದ್ದಲ್ಲಿ ಕಾರಣವೇನು?

## ಬಿ.ಬಿ.ಎಂ.ಪಿ. ಆಸ್ತಿಯಿಂದ ಸಂಗ್ರಹವಾಗುವ ತೆರಿಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೯೦ (**೪೯೬**) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ. ಆಸ್ತಿಯಿಂದ ವಾರ್ಷಿಕವಾಗಿ ಸಂಗ್ರಹವಾಗಬೇಕಾಗುವ ತೆರಿಗೆ ಎಷ್ಟು;

(ಆ) ಇಲ್ಲಿಯವರೆಗೂ ಸಂಗ್ರಹವಾಗಿರುವ ತೆರಿಗೆ ಎಷ್ಟು;

(ಇ) ಬಾಕಿ ಸಂಗ್ರಹವಾಗಬೇಕಾಗಿರುವ ತೆರಿಗೆ ಎಷ್ಟು;

(ಈ) ಇಲ್ಲಿಯವರೆಗೂ ತೆರಿಗೆ ಬಾಕಿ ಇರಲು ಕಾರಣಗಳೇನು;

(ಉ) ತೆರಿಗೆ ವಸೂಲಾತಿಯಲ್ಲಿ ಬಿ.ಬಿ.ಎಂ.ಪಿ. ಅಧಿಕಾರಿಗಳ ನಿರ್ಲಕ್ಷ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು)

(ಊ) ತೆರಿಗೆ ಹಣ ಕರಾರುವಕ್ಕಾಗಿ, ಕಾಲಮಿತಿಯಲ್ಲಿ ವಸೂಲಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಬಿ.ಬಿ.ಎಂ.ಪಿ. ವ್ಯಾಪ್ತಿಯ ಸರ್ಕಾರಿ ಆಸ್ತಿಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೯೧ (**೪೯೭**) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಸ್ತಿಗಳು ಎಷ್ಟು;

(ಆ) ಈ ಸರ್ಕಾರಿ ಆಸ್ತಿಗಳಿಂದ ಬರುವ ವಾರ್ಷಿಕ ಆದಾಯವೆಷ್ಟು;

(ಇ) ಈ ಸರ್ಕಾರಿ ಆಸ್ತಿಗಳನ್ನು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಒತ್ತುವರಿ ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಒತ್ತುವರಿ ತೆರವುಗೊಳಿಸಿರುವ ಆಸ್ತಿಯ ವಿವರಗಳನ್ನು ದಿನಾಂಕವಾರು ನೀಡುವುದು?

## ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿರುವ ಕೈಗಾರಿಕೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೯೨ (೪೯೭) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಪ್ರಾರಂಭಿಸಲಾಗಿರುವ ಸಣ್ಣ ಕೈಗಾರಿಕೆಗಳು ಯಾವುವು; (ತಾಲ್ಲೂಕುವಾರು, ಘಟಕವಾರು ವಿವರ ನೀಡುವುದು)

(ಆ) ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪರವಾನಿಗೆ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಸಣ್ಣ ಕೈಗಾರಿಕೆಗಳು ಯಾವುವು; (ತಾಲ್ಲೂಕುವಾರು, ಘಟಕವಾರು ವಿವರ ನೀಡುವುದು)

(ಇ) ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಪರವಾನಿಗೆ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಮತ್ತು ಬೇನಾಮಿ ಕೈಗಾರಿಕೆಗಳನ್ನು ನಿಯಂತ್ರಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು?

## ಪಶುವೈದ್ಯ ಮತ್ತು ಸಿಬ್ಬಂದಿಗಳ ಮಾಹಿತಿ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೯೩ (೪೯೮) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಖಾಲಿ ಇರುವ ಪಶು ವೈದ್ಯರ ಮತ್ತು ಇತರೆ ಸಿಬ್ಬಂದಿಗಳ ಹುದ್ದೆ ಎಷ್ಟು;

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಏನು ಕ್ರಮವಹಿಸಲಾಗಿದೆ;

(ಇ) ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಧನ್ವಂತರಿ ಸೇವೆಯನ್ನು ಪ್ರಾರಂಭಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಈ ಸೇವೆಯನ್ನು ನೀಡುವ ಬಗ್ಗೆ ಏನು ಕ್ರಮ ವಹಿಸಲಾಗುವುದು;

(ಈ) ಮಳೆ ಕೊರತೆಯಿಂದ ಬರಗಾಲ ಉಂಟಾದ ಸಂದರ್ಭದಲ್ಲಿ ಪಶುಗಳು ನಿರ್ವಹಣೆಗೆ ಕುಡಿಯುವ ನೀರಿನ ಸೌಲಭ್ಯ ಮತ್ತು ಪಶು ಆಹಾರ ನೀಡುವ ಬಗ್ಗೆ ಏನು ಕ್ರಮ ವಹಿಸಲಾಗಿದೆ?

## ಬೆಂಗಳೂರು ನಗರದಲ್ಲಿರುವ ಸಾರ್ವಜನಿಕ ಶೌಚಾಲಯಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೯೪ (೪೯೯) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಸಾರ್ವಜನಿಕ ಶೌಚಾಲಯಗಳ ಸಂಖ್ಯೆ ಎಷ್ಟು; ಕಳೆದ ೨ ವರ್ಷಗಳಿಂದ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ;

(ಆ) ಸಾರ್ವಜನಿಕ ಶೌಚಾಲಯಗಳಿಲ್ಲದೆ ಜನಸಾಮಾನ್ಯರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಈ ಸಮಸ್ಯೆ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಬಿ.ಡಿ.ಎ. ವತಿಯಿಂದ ಹೊಸದಾಗಿ ನಿರ್ಮಾಣಗೊಂಡಿರುವ ಬಡಾವಣೆಗಳ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೫ (೫೦೧) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಡಿ.ಎ. ವತಿಯಿಂದ ಹೊಸದಾಗಿ ನಿರ್ಮಾಣಗೊಂಡಿರುವ ಅಂಜನಾಪುರ, ಬನಶಂಕರಿ ೫/೬/೭ ನೇ ಹಂತ, ಸರ್. ಎಂ.ವಿ. ಬಡಾವಣೆ, ಅರ್ಕಾವತಿ ಬಡಾವಣೆಗಳಿಗೆ ಸಂಪೂರ್ಣವಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಯಿಂದ ಕುಡಿಯುವ ನೀರನ್ನು ನೀಡಲಾಗಿರುವುದೇ; (ವಿವರ ನೀಡುವುದು)

(ಆ) ಸದರಿ ಬಡಾವಣೆಗಳಿಗೆ ನೀರು ಮತ್ತು ಒಳಚರಂಡಿ ಯೋಜನೆಗೆ ಬಿ.ಡಿ.ಎ. ಬಿ.ಡಬ್ಲ್ಯೂ.ಎಸ್.ಎಸ್.ಬಿ. ಗೆ ನೀಡಿರುವ ಹಣವೆಷ್ಟು; ಯಾವ ಯಾವ ವರ್ಷದಲ್ಲಿ ಯಾವ ಯಾವ ಬಡಾವಣೆಗಳಿಗೆ ಎಷ್ಟು ಹಣವನ್ನು ಬಿ.ಡಿ.ಎ. ಬಿಡುಗಡೆ ಮಾಡಿದೆ; ಅಥವಾ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಯಿಂದಲೇ ಸಂಪೂರ್ಣ ವೆಚ್ಚ ಭರಿಸಲಾಗಿರುವುದೇ; (ವಿವರ ನೀಡುವುದು)

(ಇ) ಕಾವೇರಿ ೪ನೇ ಹಂತಕ್ಕೆ ಖರ್ಚಾದ ಹಣವೆಷ್ಟು; ಯಾವಾಗ ಯೋಜನೆ ರೂಪಿಸಲಾಗಿತ್ತು; ಇದಕ್ಕಾಗಿ ಸರ್ಕಾರ/ಬಿ.ಡಬ್ಲ್ಯೂ.ಎಸ್.ಎಸ್.ಬಿ. ಖರ್ಚು ಮಾಡಿದ ಹಾಗೂ ಬಿಡುಗಡೆ ಮಾಡಿದ ಹಣವೆಷ್ಟು; ವರ್ಷವಾರು ಸಂಪೂರ್ಣ ವಿವರ ನೀಡುವುದು;

(ಈ) ೪ನೇ ಹಂತದಲ್ಲಿ ಯಾವ ಯಾವ ಹೊಸ ಬಡಾವಣೆಗಳಿಗೆ ಕುಡಿಯುವ ನೀರನ್ನು ನೀಡಲಾಗಿದೆ; ಯಾವಾಗ ನೀಡಲಾಗಿದೆ? (ವರ್ಷವಾರು ವಿವರ ನೀಡುವುದು)

**ಬಿ.ಬಿ.ಎಂ.ಪಿ. ಯಲ್ಲಿ ಹಾಲಿ ಇರುವ ಸಾಲದ ಪ್ರಮಾಣದ ಬಗ್ಗೆ**

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು)** –

೨೯೬ (೫೦೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ. ಯಲ್ಲಿ ಹಾಲಿ ಇರುವ ಒಟ್ಟು ಸಾಲದ ಪ್ರಮಾಣ ಎಷ್ಟು; ಯಾವ ಯಾವ ಮೂಲಗಳಿಂದ ಸಾಲ ಮಾಡಲಾಗಿದೆ; (೨೦೦೦ ದಿಂದ ೨೦೧೫ ರವರೆಗೆ ವರ್ಷವಾರು ವಿವರ ನೀಡುವುದು)

(ಆ) ಬಿ.ಬಿ.ಎಂ.ಪಿ. ಆಸ್ತಿಗಳನ್ನು ಕಟ್ಟಡಗಳನ್ನು ಅಡವಿಟ್ಟು ಪಡೆದಿರುವ ಸಾಲದ ವಿವರಗಳನ್ನು ನೀಡುವುದು; ಯಾವ ಯಾವ ಆಸ್ತಿಗಳನ್ನು ಯಾವಾಗ ಎಷ್ಟು ಹಣಕ್ಕೆ ಅಡವಿಡಲಾಗಿದೆ; ಆ ಹಣವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ;

(ಇ) ಬಿ.ಬಿ.ಎಂ.ಪಿ. ಆಸ್ತಿ ಕಬಳಿಕೆ, ಒತ್ತುವರಿಗೆ ಸಂಬಂಧಿಸಿದಂತೆ ಯಾರ ಯಾರ ವಿರುದ್ಧ ಮೊಕದ್ದಮೆಗಳಿವೆ? (ಅವರ ಹೆಸರು ಮತ್ತು ಸಂಪೂರ್ಣ ವಿವರಗಳನ್ನು ನೀಡುವುದು)

## ಕೊಪ್ಪಳ ಜಿಲ್ಲೆ ಗಂಗಾವತಿ ತಾಲ್ಲೂಕಿನ ವಿದ್ಯಾರ್ಥಿ ಕೊಲೆ ಪ್ರಕರಣದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೭ (೫೦೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆ ಗಂಗಾವತಿ ತಾಲ್ಲೂಕು, ಹುಲಿಹೈದರ್ ಗ್ರಾಮ ಪಂಚಾಯ್ತಿಯ ಅವ್ಯವಹಾರದ ಬಗ್ಗೆ ಖಾಸಗಿ ಸುದ್ದಿವಾಹಿನಿಗೆ ಹೇಳಿಕೆ ನೀಡಿದ ಕಾರಣಕ್ಕೆ ವಿದ್ಯಾರ್ಥಿ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟ ಯಾವ ಯಾವ ಆರೋಪಿಗಳನ್ನು ಬಂದಿಸಲಾಗಿದೆ; ಮತ್ತು ಅವರ ವಿರುದ್ಧ ಹಾಕಿರುವ ಮೊಕದ್ದಮೆಯ ವಿವರ ನೀಡುವುದು;

(ಆ) ಈ ಪ್ರಕರಣದ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಕ್ರಮವೇನು? (ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ವಿತರಣೆ ಮಾಡಲಾದ ಸೈಟು ಹಾಗೂ ಫ್ಲಾಟ್‌ಗಳ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೮ (೫೦೭) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ಇಲ್ಲಿಯವರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ವಿತರಣೆ ಮಾಡಲಾದ ಫ್ಲಾಟ್ ಮತ್ತು ಸೈಟುಗಳೆಷ್ಟು; (ವಿವರ ನೀಡುವುದು)

(ಆ) ಫ್ಲಾಟ್ ಮನೆಗಳನ್ನು ಯಾವ ಯಾವ ಬಡಾವಣೆಗಳಲ್ಲಿ ಹಂಚಿಕೆ ಮಾಡಲಾಗಿದೆ; ಎಲ್ಲಿ ಎಲ್ಲಿ ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)

(ಇ) ಬಿ.ಡಿ.ಎ. ವತಿಯಿಂದ ಕೆಂಪೇಗೌಡ ಬಡಾವಣೆ, ಅರ್ಕಾವತಿ ಬಡಾವಣೆ, ಇತರೆ ಬಡಾವಣೆ ಹೆಸರಿನಲ್ಲಿ ಸೈಟ್ ಹಾಗೂ ಮನೆ ವಿತರಣೆ ಹೆಸರಿನಲ್ಲಿ ಸಂಗ್ರಹವಾದ ಮೊತ್ತ ಎಷ್ಟು;

(ಈ) ಬೆಂಗಳೂರಿನ ಕೆರೆ ಜಾಗದಲ್ಲಿ ನಿರ್ಮಾಣ ಮಾಡಿಕೊಂಡಿದ್ದ ಎಷ್ಟು ಮನೆಗಳನ್ನು ಸರ್ಕಾರ ತೆರವುಗೊಳಿಸಲಾಗಿದೆ; ಹಾಗೆಯೇ ಮನೆ ಕಳೆದುಕೊಂಡವರಿಗೆ ಉಚಿತವಾಗಿ ಫ್ಲಾಟ್ ನೀಡುವುದಾಗಿ ಸರ್ಕಾರ ಹೇಳಿದ್ದು ಅದರಂತೆ ಮನೆ ಕಳೆದುಕೊಂಡ ಯಾರು ಯಾರಿಗೆ ಎಲ್ಲೆಲ್ಲಿ ಫ್ಲಾಟ್ ನೀಡಲಾಗಿದೆ? (ವಿವರ ನೀಡುವುದು)

## ಬೆಂಗಳೂರಿನಲ್ಲಿ ಜನವರಿ–೨೦೧೫ ರಿಂದ ಇಲ್ಲಿಯವರೆವಿಗೂ ಉದ್ಘಾಟನೆಗೊಂಡ ಫ್ಲೈಓವರ್ ಬ್ರಿಡ್ಜ್ ಹಾಗೂ ರಸ್ತೆಗಳ ಕುರಿತು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೯ (೫೦೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನವರಿ ೨೦೧೫ ರಿಂದ ಇಲ್ಲಿಯವರೆವಿಗೂ ಬೆಂಗಳೂರಿನಲ್ಲಿ ಉದ್ಘಾಟನೆ ಮಾಡಿದ ಫ್ಲೈಓವರ್, ಬ್ರಿಡ್ಜ್ ಹಾಗೂ ರಸ್ತೆಗಳು ಯಾವುವು; ಈ ಪ್ರತಿ ಯೋಜನೆಗಳು ಪೂರ್ಣಗೊಳ್ಳಲು ತಗುಲಿದ ವೆಚ್ಚ ಎಷ್ಟು; ಯಾವಾಗ ಹಣ ಬಿಡುಗಡೆ ಮಾಡಲಾಗಿತ್ತು;

(ಆ) ಈ ಫ್ಲೈಓವರ್ ಬ್ರಿಡ್ಜ್ ಹಾಗೂ ರಸ್ತೆಗಳಿಗಾಗಿ ವೆಚ್ಚ ಮಾಡಿದ ಹಣದಲ್ಲಿ ಬಿ.ಡಿ.ಎ. ಪಾಲೆಷ್ಟು ಮತ್ತು ಯಾವ ಯಾವ ಮೂಲಗಳಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? (ವರ್ಷವಾರು ವಿವರಗಳನ್ನು ನೀಡುವುದು)

## ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯ, ಅತ್ಯಾಚಾರ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೦ (೫೦೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ನಡೆದಿರುವ ಮಹಿಳೆಯರ ಮೇಲಿನ ದೌರ್ಜನ್ಯ, ಕೊಲೆ, ಅತ್ಯಾಚಾರ, ಸುಲಿಗೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಎಷ್ಟು ಜನರ ವಿರುದ್ಧ ಕಾನೂನು ಕ್ರಮ ಜರುಗಿಸಿದೆ; ಇನ್ನೂ ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳನ್ನು ಪತ್ತೆ ಹಚ್ಚಬೇಕಿದೆ; (ವಿವರ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ಅಪ್ರಾಪ್ತ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಿರುವುಮ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ನಡೆದಿವೆ;

(ಉ) ಬೆಂಗಳೂರು ಸೇರಿದಂತೆ ರಾಜ್ಯದ ಇತರೆ ನಗರ ಪ್ರದೇಶಗಳಲ್ಲಿ ಸರಗಳ್ಳತನ, ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಇದನ್ನು ನಿಯಂತ್ರಣಕ್ಕೆ ತರುವಲ್ಲಿ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿರುವುದು ನಿಜವೇ; ಇಂತಹ ಪ್ರಕರಣಗಳು ಮರುಕಳಿಸದಂತೆ ನಿಯಂತ್ರಣದಲ್ಲಿಡಲು ಸರ್ಕಾರ ಯಾವ ರೀತಿಯ ರೂಪರೇಷೆಗಳನ್ನು ಹಾಕಿಕೊಂಡಿದೆ?

## ಸಣ್ಣ ಕೈಗಾರಿಕೆಗಳ ಯೋಜನೆಗಳಿಗೆ ಬಿಡುಗಡೆಯಾದ ಅನುದಾನ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೧ (೫೦೮) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಸಣ್ಣ ಕೈಗಾರಿಕೆ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಿಲ್ಲಾ ಮಟ್ಟದಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರದಿಂದ ಯಾವ ಯಾವ ಉದ್ಯಮಗಳಿಗೆ ಯಾವ ಯಾವ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲಾಗಿದೆ;

(ಇ) ಸದರಿ ಯೋಜನೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಬಿಡುಗಡೆ ಮಾಡಿರುವ ಮೊತ್ತ ಎಷ್ಟು; ವೆಚ್ಚ ಮಾಡಿರುವ ಮೊತ್ತವೆಷ್ಟು? (ವಿವರ ನೀಡುವುದು)

## ಕಸ ವಿಲೇವಾರಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೨ (೫೦೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಬೆಂಗಳೂರು ಕಸ ವಿಲೇವಾರಿಗಾಗಿ ಸರ್ಕಾರವು ವ್ಯಯಿಸಿದ ಹಣವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ಕಸ ವಿಲೇವಾರಿ ನಿರ್ವಹಣೆಯಲ್ಲಿ ತೊಡಗಿಸಿಕೊಂಡಿರುವ ಸಂಸ್ಥೆಗಳು ಹಾಗೂ ಗುತ್ತಿಗೆದಾರರು ಯಾರು ಯಾರು; ಯಾವ ಯಾವ ಪ್ರದೇಶಗಳಿಗೆ ಗುತ್ತಿಗೆ ನೀಡಲಾಗಿದೆ; ಈ ಅವಧಿಯಲ್ಲಿ ಕಸ ವಿಲೇವಾರಿಗಾಗಿ ಅವರಿಗೆ ಪಾವತಿಸಲಾದ ಹಣವೆಷ್ಟು (ವರ್ಷವಾರು, ಸಂಸ್ಥೆವಾರು, ವಾರ್ಡ್‌ವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಸರ್ಕಾರವು ಯಾವ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಆಲೋಚಿಸಿದೆ?

## ಲೋಕಾಯುಕ್ತ ದಾಳಿ ಪ್ರಕರಣಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು)** –

೩೦೩ (೫೦೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಲೋಕಾಯುಕ್ತರು ದಾಳಿ ನಡೆಸಿರುವ ಸರ್ಕಾರಿ ಅಧಿಕಾರಿ/ನೌಕರರುಗಳ ಸಂಖ್ಯೆ ಎಷ್ಟು;

(ಆ) ಈ ದಾಳಿಗಳಲ್ಲಿ ಯಾವ ಯಾವ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಬದ್ಧ ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡಿದೆ; (ಅಧಿಕಾರಿ ಹೆಸರು ಮತ್ತು ಪದನಾಮ ತಿಳಿಸುವುದು)

(ಇ) ಲೋಕಾಯುಕ್ತ ಶಿಸ್ತು ಬದ್ಧ ಕ್ರಮಕ್ಕೆ ಶಿಫಾರಸ್ಸು ಮಾಡಿದ್ದರೂ ಕೆಲ ಅಧಿಕಾರಿಗಳು ಅದೇ ಜಾಗದಲ್ಲಿ ಮುಂದುವರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಆ ಅಧಿಕಾರಿಗಳು ಯಾರು, ಹಾಲಿ ಸ್ಥಳದಲ್ಲಿ ಮುಂದುವರೆಯಲು ಕಾರಣವೇನು?

## ಮುಜರಾಯಿ ದೇವಾಲಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು)** –

೩೦೪ (೫೧೦) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳ ಸಂಖ್ಯೆ ಎಷ್ಟು; ಅವುಗಳಿಗೆ ಸೇರಿರುವ ಆಸ್ತಿಯ ಪ್ರಮಾಣ ಎಷ್ಟು; (ಭೂಮಿ, ಒಡವೆ ಹಾಗೂ ಇನ್ನಿತರ ವಿವರಗಳನ್ನೊಳಗೊಂಡ ದೇವಾಲಯವಾರು ಪ್ರತ್ಯೇಕ ಮಾಹಿತಿ [illegible]ಸುವುದು)

(ಆ) ಮುಜರಾಯಿ ದೇವಾಲಯಗಳಿಗೆ ಸೇರಿದ ಎಷ್ಟು ಪ್ರಮಾಣದ ಭೂಮಿಯನ್ನು ಅಕ್ರಮಣಕಾರರಿಂದ ಅತಿಕ್ರಮಿಸಲಾಗಿದೆ ಹಾಗೂ ಈ ದೇವಾಲಯಗಳಲ್ಲಿ ಇದುವರೆಗೆ ಆಗಿರುವ ಹಣದ ಅವ್ಯವಹಾರ ಕಳುವಾದ ಆಭರಣಗಳೇಷ್ಟು; (ಪ್ರತ್ಯೇಕವಾದ ಮಾಹಿತಿಯನ್ನು ಒದಗಿಸುವುದು)

(ಇ) ದೇವಾಲಯದ ಆಸ್ತಿ, ಆಭರಣಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಬೆಳಗಾವಿ ನಗರ ಸಂಚಾರ ಸುಧಾರಣೆಗಾಗಿ (Bel-Track) ಯೋಜನೆಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೦೫ (೫೧೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರ ಸಂಚಾರ ಸುಧಾರಾಣೆಗಾಗಿ (Bel-Track) ಬೆಲ್ ಟ್ರಾಕ್ ಯೋಜನೆ ವಿವರಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಕಮೀಷನ್‌ರೇಟ್ ಸಂಚಾರ ವ್ಯವಸ್ಥೆಗಾಗಿ ಒದಗಿಸಿರುವ ಅನುದಾನ, ಬಿಡುಗಡೆಯಾದ ಅನುದಾನ, ವಿನಿಯೋಗವಾದ ಅನುದಾನ ಎಷ್ಟು;

(ಇ) ಕಳೆದ ೨ ವರ್ಷಗಳಲ್ಲಿ ಸಂಚಾರ ವ್ಯವಸ್ಥೆಗೆ ಕೈಗೊಂಡಿರುವ ಕಾಮಗಾರಿಗಳೇನು? (ಪ್ರತಿಯೊಂದರ ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿನ ಓ.ಸಿ ಹಾಗೂ ಮಟ್ಕಾ ದಂಧೆಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೦೬ (೫೧೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಓ.ಸಿ. (ಮಟ್ಕಾ) ಹಾವಳಿ ನಿಯಂತ್ರಣಕ್ಕೆ ಸರ್ಕಾರ ವಿಶೇಷ ಕ್ರಮಗಳನ್ನು ಕೈಗೊಂಡಿದೆಯೇ;

(ಆ) ಹಾಗಿದ್ದಲ್ಲಿ, ಮಟ್ಕಾ ಏಜೆಂಟರ್ ಮೇಲೆ ಹಾಗೂ ಮಟ್ಕಾ ನಡೆಸುವವರ ಎಷ್ಟು ಜನರ ಮೇಲೆ ಕೇಸು ದಾಖಲು ಮಾಡಲಾಗಿದೆ;

(ಇ) ಮಟ್ಕಾ ಹಿನ್ನೆಲೆಯಲ್ಲಿ ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ, ಇವರ ವಿರುದ್ಧ ಇದ್ದ ನಿರ್ದಿಷ್ಟ ಆರೋಪಗಳ ವಿವರ ಏನು? (ಪ್ರತಿಯೊಬ್ಬರ ವಿವರ ನೀಡುವುದು)

## ಹುಬ್ಬಳ್ಳಿ-ಧಾರವಾಡದಲ್ಲಿ ಸಂಚಾರ ವ್ಯವಸ್ಥೆಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೦೭ (೫೧೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಸಂಚಾರ ವ್ಯವಸ್ಥೆಗಾಗಿ ಹುಬ್ಬಳ್ಳಿ–ಧಾರವಾಡ ಕಮೀಷನ್‌ರೇಟ್‌ಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಹಾಗೂ ಕೈಗೊಂಡಿರುವ ಕಾಮಗಾರಿಗಳೇನು? (ವಿವರ ನೀಡುವುದು)

(ಆ) ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಈ ಅವಳಿ ನಗರಗಳಲ್ಲಿ HD Track ಅನುಷ್ಠಾನಕ್ಕೆ ಕೈಗೊಂಡಿರುವ ಕ್ರಮವೇನು?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಕೋರ್ಟ್‌ಗಳ ವಕೀಲರುಗಳಿಗೆ ಒದಗಿಸಿರುವ ಸವಲತ್ತು ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೦೮ (೫೧೮) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶು ಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಕೋರ್ಟ್‌ಗಳಲ್ಲಿರುವ ವಕೀಲರಿಗೆ ಒದಗಿಸಿರುವ ಸವಲತ್ತುಗಳು ಯಾವುವು ;

(ಆ) ಪ್ರತಿ ಕೋರ್ಟಿನ ವಕೀಲರ ಕೊಠಡಿಯಲ್ಲಿ ಪೀಠೋಪಕರಣಗಳೆಷ್ಟು ; (ವಿವರ ನೀಡುವುದು)

(ಇ) ಈ ಕೋರ್ಟ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಕೀಲರ ಸಂಖ್ಯೆ ಎಷ್ಟು ; (ಪ್ರತಿ ಕೋರ್ಟ್‌ವಾರು ವಿವರ ನೀಡುವುದು)

(ಈ) ಮಹಿಳಾ ವಕೀಲರಿಗೆ ಒದಗಿಸಿರುವ ಸೌಲಭ್ಯಗಳು ಯಾವುವು ; (ಪ್ರತಿ ಕೋರ್ಟ್‌ವಾರು ವಿವರ ನೀಡುವುದು)

(ಉ) ಪ್ರತಿ ವರ್ಷ ಬಾರ್ ರೂಂಗಳ ನಿರ್ವಹಣೆಗೆ ಸರ್ಕಾರ ಒದಗಿಸಿರುವ ಅನುದಾನ ಎಷ್ಟು ;

(ಊ) ಕರ್ನಾಟಕ ಮೇಲ್ಮನವಿ ಪ್ರಾಧಿಕಾರದಲ್ಲಿ ಇರುವ ನ್ಯಾಯಾಧೀಶರ ಸಂಖ್ಯೆ ಎಷ್ಟು ; ಹಾಗೂ ಒದಗಿಸಿರುವ ಸಿಬ್ಬಂದಿ ಸಂಖ್ಯೆ ಎಷ್ಟು ;

(ಋ) ಕರ್ನಾಟಕ ಮೇಲ್ಮನವಿ ಪ್ರಾಧಿಕಾರದ ಮುಂದೆ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಹಾಗೂ ಪ್ರಕರಣಗಳ ತ್ವರಿತ ವಿಲೇವಾರಿಗೆ ಕೈಗೊಂಡ ಕ್ರಮವೇನು ?

## ಕಾರವಾರ ಜೈಲಿನಲ್ಲಿ ವಿಚಾರಣಾಧೀನ ಆರೋಪಿ ಸಾವಿನ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೯ (೫೧೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಕಾರಾಗೃಹದಲ್ಲಿ ವಿಚಾರಣಾಧೀನ ಆರೋಪಿಯೊಬ್ಬರು ಮೃತಪಟ್ಟಿರುವುದರ ವಿಷಯ ಸರಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಆರೋಪಿಯು ಪೋಲೀಸ್ ಇಲಾಖೆಯ ಸೆಲ್‌ನಲ್ಲಿ ಆಕಸ್ಮಿಕವಾಗಿ ಮೃತಪಟ್ಟಿರುವ ಹಿಂದೆ ಪೋಲೀಸ್ ಇಲಾಖೆಯ ಕೈವಾಡವಿದೆ ಎಂದು ಸಾರ್ವಜನಿಕರು ಪ್ರತಿಭಟನೆ ಮಾಡಿ ನಿಷ್ಪಕ್ಷಪಾತದಿಂದ ತನಿಖೆ ಮಾಡಲು

ಒತ್ತಾಯಿಸಿದ್ದು, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಕೊಲೆ ಪ್ರಕರಣದಲ್ಲಿ ಭಾಗಿಯಾದವರ ಮೇಲೆ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಪಾಲಿಕೆಯ ವಾರ್ಡ್‌ಗೆ ಹೆಸರು ಇಡುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೧೦ (೫೨೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ವಾರ್ಡ್ ನಂ. ೧೦೯ಕ್ಕೆ ಹಲವಾರು ವರ್ಷಗಳಿಂದ ಆ ಭಾಗದ ನೇಕಾರರು ಶ್ರೀ ದೇವರದಾಸಿಮಯ್ಯನವರ ಹೆಸರು ಇಡಲು ಬೇಡಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವಾರು ವರ್ಷಗಳಿಂದ ಆ ಭಾಗದಲ್ಲಿ ವಾಸ ಮಾಡುತ್ತಿರುವವರ ಬೇಡಿಕೆ ಈಡೇರಿಸದಿರಲು ಕಾರಣವೇನು ?

## ಜವಳಿ ಇಲಾಖೆಗೆ ಹಣ ಪಾವತಿ ಆಗಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೧೧ (೫೨೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ.ಯಿಂದ ಆನೇಕಲ್ ಸಿಲ್ಕ್ ಹೈಟೆಕ್ ವೀವ್ಹಿಂಗ್ ಪಾರ್ಕ್ ಸ್ಥಾಪನೆಗೆ ೨೦೦೪–೦೫ ರಲ್ಲಿ ಜಮೀನು ಮಂಜೂರು ಮಾಡಲು ಜವಳಿ ಇಲಾಖೆಯಿಂದ ಎಷ್ಟು ಹಣ ಪಾವತಿಸಲಾಗಿದೆ ;

(ಆ) ೨೫ ಎಕರೆ ಮಂಜೂರು ಮಾಡಲು ಕಳೆದ ೧೦ ವರ್ಷಗಳಲ್ಲಿ ಹಣ ಪಡೆದು ಇದುವರೆಗೂ ಮಂಜೂರು ಮಾಡದಿರಲು ಕಾರಣವೇನು ;

(ಇ) ಈ ಜವಳಿ ಪಾರ್ಕ್ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ೨೫ ಎಕರೆ ಜಮೀನನ್ನು ಕೈಮಗ್ಗ ಮತ್ತು ಜವಳಿ ಇಲಾಖೆಯ ಸ್ವಾಧೀನಕ್ಕೆ ಯಾವಾಗ ನೀಡಲಾಗುವುದು ?

**ಬೆಳಗಾವಿ ನಗರದ ನೇಕಾರರ ಸೌಲಭ್ಯದ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೧೨ (೫೨೦) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ನಗರದ ನಗರಸಭೆಗೆ ಅನುಷ್ಠಾನಗೊಳಿಸಲಾಗಿರುವ ಯೋಜನೆಗಳಾವುವು ; ಅವುಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ ;

(ಆ) ಈ ಯೋಜನೆಯಲ್ಲಿ ಬಡ ಕೂಲಿ ಕಾರ್ಮಿಕ ನೇಕಾರರಿಗೆ ರೂಪಿಸಿರುವ ಯೋಜನೆಗಳಾವುವು ;

(ಇ) ವಸತಿ ರಹಿತ ಕೂಲಿ ಕಾರ್ಮಿಕ ನೇಕಾರರಿಗೆ ವಸತಿ ಕಲ್ಪಿಸಲು ತೆಗೆದುಕೊಂಡಿರುವ ಯೋಜನೆಗಳಾವುವು ;

(ಈ) ಹಲವಾರು ಬಾರಿ ಬಡ ನೇಕಾರರು ಅರ್ಜಿ ಸಲ್ಲಿಸಿದ್ದು ಅರ್ಜಿಗಳಿಗೆ ಸ್ಪಂದಿಸದಿರಲು ಕಾರಣಗಳೇನು ; (ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರ ನೀಡುವುದು)

(ಉ) ನಗರಸಭೆಯಿಂದ ನೇಕಾರರಿಗೆ ರೂಪಿಸಿರುವ ಕಾರ್ಯಕ್ರಮಗಳೇನು ? (ವಿವರ ನೀಡುವುದು)

**ಬೆಳಗಾವಿ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆಗಳ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೧೩ (೫೨೨) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆ ಘಟಕಗಳು ಎಷ್ಟು ; ಯಾವುವು ; (ತಾಲ್ಲೂಕುವಾರು ವಿವರ ಕೊಡುವುದು)

(ಆ) ಬೇರೆ ರಾಜ್ಯಗಳಲ್ಲಿ ಸಣ್ಣ ಕೈಗಾರಿಕೆಯಲ್ಲಿ ವಿದ್ಯುತ್ ಚಾಲಿತ ಮಗ್ಗಗಳನ್ನು ಹಾಕಲು ನೇಕಾರರಿಗೆ ಪ್ರೋತ್ಸಾಹ ಕೊಡುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ ಬೆಳಗಾವಿ ಜಿಲ್ಲೆ ಹಾಗೂ ವಿಭಾಗದಲ್ಲಿ ಅತಿ ಹೆಚ್ಚು ನೇಕಾರರು ಬಡ ಕೂಲಿ ಕಾರ್ಮಿಕ ನೇಕಾರರು ಇದ್ದರೂ ಪ್ರೋತ್ಸಾಹಿಸದಿರಲು ಕಾರಣವೇನು ;

(ಈ) ಮುಂದಿನ ಆಯವ್ಯಯ ಅಥವಾ ಯೋಜನೆ ಮಾಡುವಾಗ ಬೆಳಗಾವಿ ವಿಭಾಗದ ಜಿಲ್ಲೆಗಳಿಗೆ ಸಣ್ಣ ಕೈಗಾರಿಕೆಯಿಂದ ನೇಕಾರರಿಗೆ ಅನುಕೂಲ ಹಾಗೂ ಮೂಲಭೂತ ಸೌಲಭ್ಯ ಮಾಡಲಾಗುವುದೇ ?

## ಮೆಟ್ರೋ ನೌಕರರಿಗೆ ಇತರೆ ಭತ್ಯೆ ಕೊಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೧೪ (೫೨೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೇಶದ ಬೇರೆ ಬೇರೆ ಮೆಟ್ರೋ ನಿಗಮಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ನೀಡಲಾಗುತ್ತಿರುವ ಇತರೆ ಭತ್ಯೆಗಳನ್ನು ಬೆಂಗಳೂರು ನಮ್ಮ ಮೆಟ್ರೋ ನಿಗಮದ ನೌಕರರಿಗೆ ನೀಡದಿರುವುದು ನಿಜವೇ ;

(ಆ) ಚೆನ್ನೈ ಮೆಟ್ರೋ ನಿಗಮದಲ್ಲಿ ನೌಕರರಿಗೆ ನೀಡಲಾಗುತ್ತಿರುವ ಇತರೆ ಭತ್ಯೆಗಳಾವುವು ;

(ಇ) ಇನ್ನೂ ಪ್ರಾರಂಭವಾಗದ ಚೆನ್ನೈ ಮೆಟ್ರೋ ನಿಗಮದಲ್ಲಿ ನೀಡಲಾಗುತ್ತಿರುವ ಇತರೆ ಭತ್ಯೆಗಳನ್ನು ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಬೆಂಗಳೂರು ನಮ್ಮ ಮೆಟ್ರೋ ನಿಗಮದ ನೌಕರರಿಗೆ ನೀಡದಿರಲು ಕಾರಣಗಳೇನು ;

(ಈ) ಬೆಂಗಳೂರು ನಮ್ಮ ಮೆಟ್ರೋ ನಿಗಮದ ನೌಕರರಿಗೆ, ಚೆನ್ನೈ ಮೆಟ್ರೋ ನೌಕರರಿಗೆ, ನೀಡುತ್ತಿರುವ ಇತರೆ ಭತ್ಯೆಗಳನ್ನು ಯಾವಾಗಿನಿಂದ ಕೊಡಲಾಗುವುದು ;

(ಉ) ಈ ಕುರಿತು ಯಾವ ದಿನಾಂಕದಂದು ಆದೇಶ ಹೊರಡಿಸಲಾಗುವುದು ?

## ಸರಕಾರ ನೌಕರಿಗೆ ಅರ್ಜಿ ಹಾಕುವ ಕನಿಷ್ಠ ವಯೋಮಿತಿ ಹೆಚ್ಚಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೩೧೫ (೫೩೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಿರುದ್ಯೋಗಿ ಪದವೀಧರರ ಸಂಖ್ಯೆ ಎಷ್ಟು ;

(ಆ) ಸರ್ಕಾರ ಪ್ರತಿ ವರ್ಷ ಉದ್ಯೋಗ ಮಾಡಿಕೊಳ್ಳದೆ ಇರುವುದರಿಂದ ನಿರುದ್ಯೋಗಿಗಳು ಸಂಕಷ್ಟಕ್ಕೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರ ೫–೬ ವರ್ಷ ಉದ್ಯೋಗ ನೇಮಕಾತಿ ಮಾಡಿಕೊಳ್ಳದೇ ಇರುವುದರಿಂದ ಪದವಿ ಪಡೆದ ನಿರುದ್ಯೋಗಿಗಳು ವಯೋಮಿತಿ ಮೀರಿ ನೇಮಕಾತಿಗೆ ಅನರ್ಹರಾಗುತ್ತಿರುವ ವಿಷಯ ಸರ್ಕಾರಕ್ಕೆ ತಿಳಿದಿದೆಯೇ ;

(ಈ) ಆದ್ದರಿಂದ ಉದ್ಯೋಗಕ್ಕೆ ಅರ್ಜಿ ಹಾಕಲು ಈಗಿರುವ ವಯೋಮಿತಿಯನ್ನು ಕನಿಷ್ಠ ೫ ವರ್ಷ ಹೆಚ್ಚಿಸಿದರೆ ನಿರುದ್ಯೋಗಿಗಳಿಗೆ ಅನುಕೂಲ ಆಗುವುದರ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ನಗರಾಭಿವೃದ್ಧಿ ಸಂಸ್ಥೆಗಳಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹುದ್ದೆಗಳ ಭರ್ತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೩೧೬ (೫೩೩) ನಗರಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿ ಮಹಾನಗರ ಪಾಲಿಕೆ, ಪುರಸಭೆ, ಹಾಗೂ ನಗರ ಸಭೆಗಳಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹುದ್ದೆಗಳ ಸಂಖ್ಯೆ ಎಷ್ಟು ; ಎಷ್ಟು ವರ್ಷದಿಂದ ಖಾಲಿ ಇವೆ ;

(ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆಗೆ ತೊಂದರೆಯಾಗುತ್ತಿರುವುದು ನಿಜವೇ ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವುದಾದರೂ ಕಾಲಮಿತಿಯನ್ನು ಸರ್ಕಾರ ಹಾಕಿಕೊಂಡಿದೆಯೇ ;

(ಈ) ಹಾಕಿಕೊಂಡಿದ್ದಲ್ಲಿ, ಯಾವ ದಿನಾಂಕದೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿದ ನಿವೇಶನಗಳ ವಿತರಣೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೧೭ (**೫೩೫**) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ೨೦೦೧ ರಿಂದ ಎಷ್ಟು ವಸತಿ ಬಡಾವಣೆಗಳನ್ನು ನಿರ್ಮಿಸಲಾಗಿದೆ ;

(ಆ) ಇವುಗಳನ್ನು ಯಾವ ಯಾವ ಪ್ರದೇಶದಲ್ಲಿ ನಿರ್ಮಿಸಲಾಗಿದೆ ;

(ಇ) ಈ ವಸತಿ ಬಡಾವಣೆಯಲ್ಲಿ ಎಷ್ಟು ಜನರಿಗೆ ನಿವೇಶನವನ್ನು ಹಂಚಲಾಗಿದೆ; (ವಿವರ ನೀಡುವುದು)

(ಈ) ಈಗ ಹಂಚಿಕೆಯಾಗದೆ ಖಾಲಿ ಉಳಿದಿರುವ ನಿವೇಶನಗಳ ಸಂಖ್ಯೆ ಎಷ್ಟು ; (ಬಡಾವಣೆವಾರು ಮಾಹಿತಿ ನೀಡುವುದು)

(ಉ) ರೆವಿನ್ಯೂ ನಿವೇಶನಗಳನ್ನು ಸ್ವಾಧೀನಪಡಿಸಿಕೊಂಡ ಪ್ರಕರಣಗಳಲ್ಲಿ ಎಷ್ಟು ಜನರಿಗೆ ಪ್ರಾಧಿಕಾರದಿಂದ ಇನ್ನೂ ಬದಲಿ ನಿವೇಶನ ನೀಡಲಾಗಿಲ್ಲ ; (ಫಲಾನುಭವಿವಾರು ಮಾಹಿತಿ ನೀಡುವುದು)

(ಊ) ಈ ಫಲಾನುಭವಿಗಳಿಗೆ ಬದಲಿ ನಿವೇಶನಗಳನ್ನು ಯಾವಾಗ ಹಂಚಿಕೆ ಮಾಡಲಾಗುವುದು ?

## ಬೆಂಗಳೂರು ಜಲಮಂಡಳಿಯಲ್ಲಿ ಮಂಜೂರಾದ ಹುದ್ದೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೧೮ (೫೩೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಜಲಮಂಡಳಿಯಲ್ಲಿ ಮಂಜೂರಾದ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳು ಯಾವುವು ;

(ಆ) ಈ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆ ಹಾಗೂ ವೇತನ ಶ್ರೇಣಿ ಹಾಗೂ ಒಟ್ಟು ದೊರೆಯುವ ವೇತನವೆಷ್ಟು ;

(ಇ) ೨೦೦೩ ರಿಂದ ಇಲ್ಲಿಯವರೆಗೆ ಬೆಂಗಳೂರು ಜಲಮಂಡಳಿಯಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಈ) ಇತ್ತೀಚೆಗೆ ಬೆಂಗಳೂರು ಜಲಮಂಡಳಿಯ ನೌಕರರ ವೇತನದಲ್ಲಿ ಹೆಚ್ಚಳ ಮಾಡಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಹುದ್ದೆವಾರು ಹೊಸ ವೇತನ ಶ್ರೇಣಿ ಹಾಗೂ ಒಟ್ಟು ದೊರೆಯುವ ವೇತನ ಎಷ್ಟು ?

## ಪಶು ಸಂಗೋಪನಾ ಇಲಾಖಾ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧೯ (೫೨೯) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶು ಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ಪಶು ಸಂಗೋಪನಾ ಇಲಾಖೆಯಿಂದ ಅನುಷ್ಠಾನಗೊಳ್ಳಲಿರುವ ಕಾರ್ಯಕ್ರಮಗಳೇನು ;

(ಆ) ರಾಜ್ಯದಲ್ಲಿ ಅಗತ್ಯ ಸಂಖ್ಯೆಯಲ್ಲಿ ಪಶು ವೈದ್ಯ ಆಸ್ಪತ್ರೆಗಳು ಇಲ್ಲದಿರುವುದು ಸರ್ಕಾರಧ ಗಮನಕ್ಕೆ ಬಂದಿದೆಯೇ ; ಪಶುವೈದ್ಯ ಆಸ್ಪತ್ರೆಗಳ ಹೆಚ್ಚಳಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಸರ್ಕಾರ ಇಲ್ಲಿಯವರೆಗೆ ಎಲ್ಲೆಲ್ಲಿ ಸಂಚಾರಿ ಪಶು ವೈದ್ಯ ಆಸ್ಪತ್ರೆ ಪ್ರಾರಂಭಿಸಿದೆ ; (ವಿವರ ನೀಡುವುದು)

(ಈ) ಆಸ್ಪತ್ರೆಗಳ ಸಂಖ್ಯೆ ಹೆಚ್ಚಳ, ಸಿಬ್ಬಂದಿ ಕೊರತೆ ನೀಗಿಸುವುದು ಸೇರಿದಂತೆ, ಆಸ್ಪತ್ರೆಗಳ ಉನ್ನತೀಕರಣಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಸಣ್ಣ ಕೈಗಾರಿಕಾ ಇಲಾಖೆಯ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೨೦ (೫೩೦) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕಾ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳು ಯಾವುವು ; ಅವುಗಳಲ್ಲಿ ಕೇಂದ್ರ ಮತ್ತು ರಾಜ್ಯದ ಯೋಜನೆಗಳಾವುವು ;

(ಆ) ಇಲಾಖೆಯಿಂದ ಕಳೆದ ಎರಡು ವರ್ಷಗಳಲ್ಲಿ ವೆಚ್ಚವಾದ ಅನುದಾನವೆಷ್ಟು ; (ಜಿಲ್ಲಾವಾರು ಯೋಜನೆವಾರು, ಮಂಜೂರಾದ ಅನುದಾನ ವೆಚ್ಚವಾದ ಅನುದಾನದ ವಿವರ ನೀಡುವುದು)

(ಇ) ಗ್ರಾಮೀಣ ಪ್ರದೇಶದ ಯುವಕರಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜಿಸಲು ಹಾಗೂ ಉದ್ಯೋಗ ಸೃಷ್ಟಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಮುಜರಾಯಿ ಇಲಾಖೆಯ ಅನುದಾನದ ಮಾಹಿತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೨೧ (೫೨೮) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶು ಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಳೆದ ೨ ವರ್ಷಗಳಲ್ಲಿ ಯಾವ ಯಾವ ದೇವಸ್ಥಾನಗಳ ಅಭಿವೃದ್ಧಿ ಮತ್ತು ಜೀರ್ಣೋದ್ಧಾರಕ್ಕೆ ಅನುಗಾನ ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು–ತಾಲ್ಲೂಕುವಾರು ವಿವರ ನೀಡುವುದು ; ಮುಜರಾಯಿ ಮತ್ತು ಮುಜರಾಯಿಯೇತರ ದೇವಾಲಯಗಳ ವಿವರ ನೀಡುವುದು )

(ಆ) ದೇವಸ್ಥಾನ ಮತ್ತು ಹಿಂದೂ ಧಾರ್ಮಿಕ ಸಂಸ್ಥೆಗಳಿಗೆ ಯಾವ–ಯಾವ ಉದ್ದೇಶಗಳಿಗೆ ಮುಜರಾಯಿ ಇಲಾಖೆಯಿಂದ ಅನುದಾನ ಬಿಡುಗಡೆ ಮಾಡಲಾಗುತ್ತಿದೆ ; ಅದಕ್ಕೆ ಇರುವ ಅರ್ಹತೆ, ಮಾನದಂಡ, ಮಾರ್ಗಸೂಚಿಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯ ಧಾರ್ಮಿಕ ಪರಿಷತ್ ರಚನೆ ಮಾಡಲಾಗಿದೆಯೇ ; ಹೌದಾದಲ್ಲಿ, ಸಂರಚನೆಯ ವಿವರ ನೀಡುವುದು ;

(ಈ) ಕಳೆದ ೨ ವರ್ಷಗಳಲ್ಲಿ ರಾಜ್ಯ ಧಾರ್ಮಿಕ ಪರಿಷತ್‌ನ ಎಷ್ಟು ಸಭೆ ನಡೆಸಲಾಗಿದೆ ; ಕೈಗೊಂಡ ಪ್ರಮುಖ ನಿರ್ಣಯಗಳೇನು ?

## ಕೈಗಾರಿಕೆಗಳಿಗೆ ನೀಡಿರುವ ರಿಯಾಯಿತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೨೨ (೫೨೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಯಾವ ಯಾವ ಉದ್ಯಮಗಳಿಗೆ ಸರಕಾರದಿಂದ ರಿಯಾಯಿತಿ ನೀಡಲಾಗಿದೆ ;

(ಆ) ಸದರಿ ಖಾಸಗಿ ಕಂಪನಿಗಳಿಗೆ ಸರ್ಕಾರದಿಂದ ನೀಡಿರುವ ರಿಯಾಯಿತಿಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಕಂಪನಿಗಳು ಹೂಡಿಕೆ ಮಾಡಲು ಉದ್ದೇಶಿಸಿರುವ ಬಂಡವಾಳ ಎಷ್ಟು ;

(ಈ) ಸರಕಾರದಿಂದ ರಿಯಾಯಿತಿ ನೀಡಲು ವಿಧಿಸಿರುವ ಷರತ್ತುಗಳೇನು ; ಸದರಿ ಉದ್ಯಮ ಸ್ಥಾಪನೆಯಿಂದ ಸೃಷ್ಟಿಯಾಗುವ ಉದ್ಯೋಗವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಮತ್ತು ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೨೩ (೫೪೩+೪೫೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕಗಳನ್ನು ಸ್ಥಾಪಿಸಲಾಗಿದೆಯೇ ; ಇಲ್ಲದಿದ್ದಲ್ಲಿ ಕಾರಣಗಳೇನು ;

(ಆ) ಈ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಮಕ್ಕಳ ಹಕ್ಕುಗಳ ಹಾಗೂ ಮಕ್ಕಳ ಸಂಬಂಧಿತ ಕಾಯಿದೆ/ ಕಾನೂನುಗಳ ತರಬೇತಿ ನೀಡಲಾಗಿದೆಯೇ ; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಶಾಲೆ ಮತ್ತು ಸಮುದಾಯಗಳಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ಪ್ರಚಾರ ನೀಡಲಾಗಿದೆಯೇ ;

(ಈ) ಮೂರು ವರ್ಷಗಳಿಂದ ಮಕ್ಕಳ ಪೊಲೀಸ್ ಘಟಕಕ್ಕಾಗಿ ಸರ್ಕಾರ ಮೀಸಲಿಟ್ಟಿರುವ ಹಣ ಮತ್ತು ಇಲಾಖೆಯಿಂದ ಖರ್ಚಾಗಿರುವ ಹಣ ಎಷ್ಟು ? (ವಿವರ ನೀಡುವುದು)

## ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಶಾಲೆಗಳ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೨೪ (೫೪೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಈ ಮಹಾನಗರ ಪಾಲಿಕೆಯ ಶಾಲೆಗಳಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೂ ಸರ್ಕಾರದ ಕ್ಷೀರಭಾಗ್ಯ ಯೋಜನೆ ಜಾರಿಯಾಗಿದೆಯೇ ;

(ಇ) ಇಲ್ಲದಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಜಾರಿ ಮಾಡಲಾಗುವುದು ?

## ರಾಜ್ಯದಲ್ಲಿರುವ ಪೊಲೀಸ್ ಠಾಣೆಗಳ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೨೫ (೫೪೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಇರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮತ್ತು ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ;

(ಆ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಈ ಪೊಲೀಸ್ ಠಾಣೆಗಳಿಗೆ ಪ್ರತಿ ವರ್ಷ ನೀಡುತ್ತಿರುವ ಬಾಡಿಗೆ ಮೊತ್ತವೆಷ್ಟು ;

(ಇ) ಈ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಈ ಪೊಲೀಸ್ ಠಾಣೆಗಳ ಬದಲಾಗಿ ಸರ್ಕಾರಿ ಸ್ಥಳಗಳಲ್ಲೇ ಠಾಣೆಗಳನ್ನು ನಿರ್ಮಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಈ) ೨೦೧೫-೧೬ನೇ ಸಾಲಿನಲ್ಲಿ ಪೊಲೀಸ್ ಠಾಣೆಗಳನ್ನು ಸ್ವಂತ ಕಟ್ಟಡಗಳಲ್ಲಿಯೇ ನಿರ್ಮಿಸಲು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ?

## ಹೈದರಾಬಾದ್-ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಸರ್ಕಾರಿ ಇಲಾಖೆಗಳಲ್ಲಿ ಮಂಜೂರಾದ ಮತ್ತು ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೨೬ (೫೫೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯುವಿಟ್ಟು ತಿಳಿಸುವರೆ :-

(ಅ) ಹೈದರಾಬಾದ್-ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿ ಸರ್ಕಾರಿ ಇಲಾಖೆಗಳಲ್ಲಿ ಮಂಜೂರಾದ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; (ಇಲಾಖಾವಾರು, ವೃಂದವಾರು ಮಾಹಿತಿ ನೀಡುವುದು)

(ಆ) ಅನುಚ್ಛೇದ ೩೭೨(ಜೆ) ಅಡಿಯಲ್ಲಿ ಮೀಸಲಿಟ್ಟ ಹುದ್ದೆಗಳೆಷ್ಟು ; ಹೈದರಾಬಾದ್ ಕರ್ನಾಟಕ ಪ್ರದೇಶದ ಹಾಗೂ ಹೈದರಾಬಾದ್ ಕರ್ನಾಟಕ ಪ್ರದೇಶ ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಮೀಸಲಿಟ್ಟ ಹುದ್ದೆಗಳೆಷ್ಟು ; (ಇಲಾಖಾವಾರು, ವೃಂದವಾರು, ಜಿಲ್ಲಾವಾರು ಪ್ರತ್ಯೇಕ ಸಂಪೂರ್ಣ ಮಾಹಿತಿ ನೀಡುವುದು)

(ಇ) ಅನುಚ್ಛೇದ ೩೭೧(ಜೆ) ಅಡಿಯುಲ್ಲಿ ಬಡ್ತಿ ಪ್ರಕ್ರಿಯೆಯಲ್ಲಿ ಗೊಂದಲ ಉಂಟಾಗಿ ಬಡ್ತಿ ಪ್ರಕ್ರಿಯೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಇದೆಯೇ ; (ಜಿಲ್ಲಾವಾರು, ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಅನುಚ್ಛೇದ ೩೭೧(ಜೆ) ಅಡಿಯಲ್ಲಿ ನ್ಯಾಯಯುತವಾಗಿ ಮೀಸಲು ನೀಡಿ ಈ ಬಡ್ತಿ ಪ್ರಕ್ರಿಯೆಗೆ ಅತೀ ಶೀಘ್ರ ಚಾಲನೆಗೆ ಸರ್ಕಾರ ಮುಂದಾಗುವುದೇ ? (ಜಿಲ್ಲಾವಾರು, ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅನುಕಂಪ ಆಧಾರದ ಮೇಲೆ ನೇಮಕಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೨೭ (೫೪೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಕೋರಿ ಸರ್ಕಾರಕ್ಕೆ ಬಂದಿರುವ ಪ್ರಕರಣಗಳೆಷ್ಟು; (ಹೈದ್ರಾಬಾದ್–ಕರ್ನಾಟಕದ ಈ ಭಾಗದ ೬ ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕಿನ ಮಾಹಿತಿ ನೀಡುವುದು)

(ಆ) ಸಂವಿಧಾನದ ಕಲಂ ೩೭೧ (ಜೆ)ಗೆ ತಿದ್ದುಪಡಿಯ ನಂತರ ಹೈದ್ರಾಬಾದ್–ಕರ್ನಾಟಕದ ಭಾಗದ ಜಿಲ್ಲೆಗಳಲ್ಲಿ ಅನುಕಂಪದ ಆಧಾರದ ಮೇಲೆ ಎಷ್ಟು ಜನರ ನೇಮಕ ಮಾಡಿಕೊಳ್ಳಲಾಗಿದೆ; ಬಾಕಿ ಇರುವ ಅರ್ಜಿಗಳೆಷ್ಟು; (ಹೈದ್ರಾಬಾದ್–ಕರ್ನಾಟಕದ ಈ ಭಾಗದ ೬ ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕಿನ ಮಾಹಿತಿ ಒದಗಿಸುವುದು)

(ಇ) ಅನುಕಂಪದ ಆಧಾರದ ಮೇಲೆ ನೇಮಕಾತಿ ಪ್ರಕ್ರಿಯೇಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ವಿಳಂಬವಾಗಲು ಕಾರಣಗಳೇನು; (ಮಾಹಿತಿ ನೀಡುವುದು)

(ಈ) ಬಾಕಿ ಇರುವ ಅನುಕಂಪದ ಆಧಾರದ ನೇಮಕಾತಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ಒದಗಿಸುವುದು)

## ಹೈದರಾಬಾದ್ ಕರ್ನಾಟಕ ಭಾಗಕ್ಕೆ ಹೊಸದಾಗಿ ಸೃಜಿಸಿ ಮೀಸಲಿಟ್ಟ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೨೮ (೫೪೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂವಿಧಾನದ ಕಲಂ ೩೭೧(ಜೆ) ಅನ್ವಯ ರಾಜ್ಯದ ಎಲ್ಲಾ ಇಲಾಖೆಗಳಲ್ಲಿ ಹೈದರಾಬಾದ್ ಕರ್ನಾಟಕ ಭಾಗಕ್ಕೆ ಹೊಸದಾಗಿ ಸೃಜಿಸಿ ಮೀಸಲಿಟ್ಟ ಹುದ್ದೆಗಳ ಸಂಖ್ಯೆ ಎಷ್ಟು; ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು;

(ಆ) ಸದರಿ ಹುದ್ದೆಗಳ ಪೈಕಿ ನೇರ ನೇಮಕಾತಿ ಹಾಗೂ ಪದೋನ್ನತಿ ಹೊಂದಿ ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಜಿಲ್ಲಾವಾರು ಮಾಹಿತಿ ನೀಡುವುದು

(ಇ) ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಕೈಗೊಳ್ಳುವ ಕ್ರಮವೇನು; ಮಾಹಿತಿ ನೀಡುವುದು;

(ಈ) ೨೦೧೫-೧೬ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ಹಾಗೂ ಭರ್ತಿ ಮಾಡಿರುವ ಹುದ್ದೆಗಳೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿ ತಾಲ್ಲೂಕಿನಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಭೂಸ್ವಾಧೀನ ಪಡಿಸಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ)** –

೩೨೯ (೫೫೧) ಮುಖ್ಯಮಂತ್ರಿಗಳು ಈ **ವಿಷಯಗಳನ್ನು** ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ತಾಲ್ಲೂಕಿನಲ್ಲಿ ಅಧಿಸೂಚನೆ ಹೊರಡಿಸಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಗಾಗಿ ಭೂಸ್ವಾಧೀನ ಪಡಿಸಲಾಗಿದೆಯೇ; ಹೊರಡಿಸಿದಲ್ಲಿ ಅಧಿಸೂಚನೆ ದಿನಾಂಕ, ಯಾವ ಉದ್ದೇಶಕ್ಕಾಗಿ, ಸ್ವಾಧೀನ ಪಡಿಸಿದ ಜಮೀನಿನ ವಿವರ, ಪ್ರತಿ ಎಕರೆಗೆ ಕೊಟ್ಟ ಪರಿಹಾರದ ಮೊತ್ತವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಹಲವಾರು ವರ್ಷ ಕಳೆದರು ಭೂಸ್ವಾಧೀನ ಪ್ರಕ್ರೀಯೆ ನೆನಗುದಿಗೆ ಬಿದ್ದು ರೈತರು ತಮ್ಮ ಅಮೂಲ್ಯವಾದ ಭೂಮಿಯನ್ನು ಕಳೆದುಕೊಂಡು,

ಯೋಗ್ಯವಾದ ಪರಿಹಾರ ದೊರೆಯದೆ ಹಾಗೂ ಜಮೀನು ಅಭಿವೃದ್ಧಿ ಹಾಗೂ ಕುಟುಂಬದ ಅಗತ್ಯಗಳಿಗಾಗಿ ಮಾರಾಟ ಮಾಡಲಾಗದೆ ಕಂಗಾಲಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವಿವರ ನೀಡುವುದು, ರೈತರ ಕಂಗೆಟ್ಟ ಪರಿಸ್ಥಿತಿಯನ್ನು ಸರಿಪಡಿಸುವ ನಿಟ್ಟಿನಲ್ಲಿ ಸರಕಾರದ ಮುಂದೆ ಇರುವ ಕ್ರಮಗಳೇನು;

(ಇ) ಹಲವಾರು ವರ್ಷ ಕಳೆದರು ಸ್ವಾಧೀನ ಪಡಿಸಿಕೊಂಡ ಸಾವಿರಾರು ಎಕರೆ ಪ್ರದೇಶದಲ್ಲಿ ಯಾವುದೇ ಕೈಗಾರಿಕೆ ಸ್ಥಾಪಿಸದೆ ಇರುವ ಸಂಗತಿ ಸರಕಾರದ ಗಮನಕ್ಕೆ ಇದೆಯೇ; ಅಮೂಲ್ಯವಾದ ಜಮೀನಿನ ಸದ್ಬಳಕೆ ಮಾಡುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯದ ಹಾಲು ಒಕ್ಕೂಟಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೩೩೦ (೫೫೨) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹಾಲು ಒಕ್ಕೂಟಗಳಿವೆ; (ವಿವರಗಳೊಡನೆ)

(ಆ) ಸದರಿ ಹಾಲು ಒಕ್ಕೂಟಗಳು ಹಾಲು ಉತ್ಪಾದಕರಿಗೆ ಯಾವ ಅವಧಿಯ ಎಷ್ಟು ಬಾಕಿ ಮೊತ್ತವನ್ನು ನೀಡಬೇಕಾಗಿದೆ; (ಒಕ್ಕೂಟವಾರು ಪ್ರತ್ಯೇಕವಾದ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಪ್ರತಿ ಲೀಟರ್ ಹಾಲಿಗೆ ರೂ. ೪.೦೦ ಪ್ರೋತ್ಸಾಹ ಧನವನ್ನು ಎಂದಿನಿಂದ ಜಾರಿಗೆ ತರಲಾಗಿದೆ; ಸದರಿ ಹಾಲು ಒಕ್ಕೂಟಗಳಿಗೆ ಯಾವ ಅವಧಿಯ, ಎಷ್ಟು ಮೊತ್ತದ ಬಾಕಿ ಪ್ರೋತ್ಸಾಹ ಧನ ನೀಡಬೇಕಾಗಿದೆ; (ಒಕ್ಕೂಟವಾರು ಪ್ರತ್ಯೇಕವಾದ ಮಾಹಿತಿ ನೀಡುವುದು)

(ಈ) ಹಾಲು ಉತ್ಪಾದಕರ ಸಂಘಗಳು ಸರಬರಾಜು ಮಾಡುವ ಹಾಲಿನಲ್ಲಿ ೮.೫ ಎಸ್.ಎನ್.ಎಫ್. ಪ್ರಮಾಣದ ಹಾಲಿಗೆ ಮಾತ್ರ ಪ್ರೋತ್ಸಾಹಧನ ನೀಡಲಾಗುತ್ತಿದೆಯೇ;

(ಉ) ಹಾಗಾದರೆ, ಈ ಪದ್ಧತಿ ಎಂದಿನಿಂದ ಜಾರಿಯಲ್ಲಿದೆ; ಹಾಲು ಉತ್ಪಾದಕರ ಸಂಘಗಳು ಸರಬರಾಜು ಮಾಡುವ ಹಾಲಿನಲ್ಲಿ ೮.೫ ಎಸ್.ಎನ್.ಎಫ್. ಪ್ರಮಾಣಕ್ಕಿಂತ ಕಡಿಮೆ ಪ್ರಮಾಣದ ಹಾಲಿಗೆ ಪ್ರೋತ್ಸಾಹಧನ ನೀಡಲಾಗುತ್ತಿಲ್ಲವೇ;

(ಊ) ಈ ಪದ್ಧತಿಯಿಂದ ಶೇಕಡ ಎಷ್ಟು ಹಾಲು ಉತ್ಪಾದಕ ಸಂಘಗಳು ಪ್ರೋತ್ಸಾಹ ಧನದಿಂದ ವಂಚಿತವಾಗುತ್ತಿವೆ?

**ರಾಜ್ಯದ ಕಾನೂನು ಕಾಲೇಜುಗಳ ಬಗ್ಗೆ ಮಾಹಿತಿ**

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೩೩೦ (೫೫೩) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ/ಅನುದಾನ ರಹಿತ/ಅನುದಾನಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿನ ಅನುದಾನ ರಹಿತ ಕಾನೂನು ಕಾಲೇಜುಗಳಿಗೆ ವೇತನಾನುದಾನ ನೀಡಲಾಗುತ್ತಿದೆಯೇ;

(ಇ) ಹಾಗಾದರೆ, ಎಂದಿನಿಂದ ವೇತನಾನುದಾನ ನೀಡಲು ಆದೇಶ ನೀಡಲಾಗಿದೆ; (ವಿವರ ನೀಡುವುದು)

(ಈ) ವೇತನಾನುದಾನ ನೀಡುವಲ್ಲಿ ಅನುಸರಿಸಲಾಗುವ ಮಾರ್ಗಸೂಚಿಗಳೇನು;

(ಉ) ಹಾಗಾದರೆ, ಇದುವರೆವಿಗೂ ವೇತನಾನುದಾನ ನೀಡಿರುವ ಕಾಲೇಜುಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

**ಜ್ಞಾನಭಾರತಿ ಸರ್ವೆ ನಂಬರ್ ೭೬–೭೭ರ ಬಗ್ಗೆ**

**ಶ್ರೀಮತಿ ಮೋಟಮ್ಮ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೩೩೨ (೫೫೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜ್ಞಾನಭಾರತಿ ಸರ್ವೆ ನಂಬರ್ ೭೬-೭೭ರಲ್ಲಿ ಬಿ.ಡಿ.ಎ. ಸ್ವಾಧೀನ ಮಾಡಿದ ಭೂಮಿ ಎಷ್ಟು ಎಕರೆ;

(ಆ) ಈ ಸರ್ವೆ ನಂಬರಿನ ಭೂಮಿ ಮುಫ್ತಲ್ ಕಾವಲ್ ಆಗಿದ್ದು, ಇದನ್ನು ಯಾವ ಕಾನೂನಿನ ಪ್ರಕಾರ ಯಾರು ಯಾರಿಗೆ ಮಂಜೂರು ಮಾಡಲಾಯಿತು;

(ಇ) ಗ್ರಾಂಟ್ ರೂಲ್ಸ್ ಮೀರಿ ಹೇಗೆ ಮಂಜೂರು ಮಾಡಲಾಯಿತು;

(ಈ) ಅದೇ ಭೂಮಿಯನ್ನು ಡಿ-ನೋಟಿಫೈ ಮಾಡಿದ್ದು ಸರಿಯೇ, ಮತ್ತು ಯಾವ ಕಾನೂನಿನ ಅನ್ವಯ ಮಾಡಲಾಯಿತು?

## ಸವದತ್ತಿ ಯಲ್ಲಮ್ಮನ ದೇವಸ್ಥಾನಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

**೩೩೩ (೫೫೬)** ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸವದತ್ತಿ ತಾಲ್ಲೂಕಿನ ಯಲ್ಲಮ್ಮನ ದೇವಸ್ಥಾನಕ್ಕೆ ಬೇರೆ ಬೇರೆ ರಾಜ್ಯಗಳಿಂದ ಭಕ್ತರು ಆಗಮಿಸುತ್ತಿರುವುದು ನಿಜವಲ್ಲವೆ;

(ಆ) ಅಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದರಿಂದ ಭಕ್ತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕಳೆದ ಐದು ವರ್ಷದಲ್ಲಿ ಇಲ್ಲಿ ತೆಗೆದುಕೊಂಡ ಅಭಿವೃದ್ಧಿ ಕಾಮಗಾರಿಗಳಾವುವು; ಇದಕ್ಕೆ ತಗಲಿರುವ ವೆಚ್ಚವೆಷ್ಟು;

(ಈ) ಸದರಿ ಕ್ಷೇತ್ರದ ಅಭಿವೃದ್ಧಿಗಾಗಿ ಹಿಂದಿನ ಅಧಿವೇಶನದಲ್ಲಿ ಎಲ್ಲ ಮೂಲಭೂತ ಸೌಲಭ್ಯ ಒದಗಿಸುವುದಾಗಿ ಆಶ್ವಾಸನೆ ನೀಡಿದ್ದು ನಿಜವಲ್ಲವೇ;

(ಉ) ಹಾಗಾದರೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಬಳೆ ಮಾಡುವ ಸಣ್ಣ ಉದ್ದಿಮೆದಾರರಿಗೆ ಹಣಕಾಸಿನ ನೆರವು ನೀಡುವ ಕುರಿತು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೩೩೪ (೫೫೮) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೈಲಹೊಂಗಲ ಮತಕ್ಷೇತ್ರದ ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದಲ್ಲಿ ಅನೇಕ ವರ್ಷಗಳಿಂದ ಬಳೆ ಮಾಡುವ ಉದ್ಯಮವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಉದ್ಯಮುದವರಿಗೆ ಸರ್ಕಾರದಿಂದ ಯಾವುದೇ ನೆರವು ಸಿಗದಿರುವುದರಿಂದ ಇವರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೆ, ಈ ಸಣ್ಣ ಉದ್ದಿಮೆದಾರರಿಗೆ ಮೂಲಭೂತ ಸೌಲಭ್ಯ ಮತ್ತು ಹಣಕಾಸಿನ ನೆರವು ನೀಡಲು ಕ್ರಮ ಕೈಗೊಳ್ಳಲಾಗುವುದೇ?

## ಬೈಲಹೊಂಗಲ ನಗರಕ್ಕೆ ಕುಡಿಯುವ ನೀರಿನ ಯೋಜನೆ (24x7) ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೩೩೫ (೫೫೯) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ನಗರಕ್ಕೆ ಕುಡಿಯುವ ನೀರಿನ ಸಲುವಾಗಿ (24x7) ಕಳೆದ ವರ್ಷದ ಆಯವ್ಯಯದಲ್ಲಿ ಮೀಸಲಿಟ್ಟ ಹಣವೆಷ್ಟು ಹಾಗೂ ಬಿಡುಗಡೆ ಮಾಡಿರುವ ಹಣವೆಷ್ಟು;

(ಆ) ಈ ಯೋಜನೆಗೆ ಒಟ್ಟು ಎಷ್ಟು ಹಣ ಬೇಕಾಗುವುದು;

(ಇ) ಅನೇಕ ಬಾರಿ ಮನವಿ ಮಾಡಿದರೂ ಸಹ ಕೆಲವು ಅಧಿಕಾರಿಗಳ ನಿರ್ಲಕ್ಷತೆಯಿಂದ ಇನ್ನೂವರೆಗೂ ಅಂದಾಜು ಪಟ್ಟಿಯನ್ನು ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಾದರೆ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು; ಸದರಿ ಯೋಜನೆಯನ್ನು ಯಾವಾಗ ಜಾರಿಗೆ ತರಲಾಗುವುದು?

## ಬೈಲಹೊಂಗಲ ಮತಕ್ಷೇತ್ರದ ಕೆಂಗಾನೂರ ಗ್ರಾಮದಲ್ಲಿ ಪಶು ಆಸ್ಪತ್ರೆ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೩೩೬ (೫೫೭) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಸದರಿ ಮತಕ್ಷೇತ್ರದ ಕೆಂಗಾನೂರ ಗ್ರಾಮಕ್ಕೆ ಪಶು ಆಸ್ಪತ್ರೆಯ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೆ, ಈ ವರ್ಷ ಪ್ರಾರಂಭ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

## ಲೋಕಾಯುಕ್ತ ದಾಳಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು) –**

೩೩೭ (೫೨೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೨ ರಿಂದ ಈವರೆವಿಗೆ ನಿಗಧಿತ ಪ್ರಮಾಣಕ್ಕಿಂತ ಅಧಿಕ ಪ್ರಮಾಣದ ಆಸ್ತಿಯನ್ನು ಹೊಂದಿದ ಎಷ್ಟು ಸರ್ಕಾರಿ ಅಧಿಕಾರಿಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿರುತ್ತಾರೆ; (ಹೆಸರು, ಹುದ್ದೆ, ಇಲಾಖೆ ಇತ್ಯಾದಿ ವರ್ಷವಾರು ವಿವರಗಳನ್ನು ಒದಗಿಸುವುದು)

(ಆ) ಈವರೆವಿಗೆ ಅಕ್ರಮ ಆಸ್ತಿ ಹೊಂದಿದ ಎಷ್ಟು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ;

(ಇ) ಎಷ್ಟು ಪ್ರಕರಣಗಳು ವಿಚಾರಣೆಯ ಹಂತದಲ್ಲಿದೆ?

## ಕಲುಬುರಗಿ ನಗರಕ್ಕೆ ಕುಡಿಯುವ ನೀರು ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೩೩೮ (೫೧೪) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲುಬುರಗಿ ನಗರ ಪ್ರದೇಶಕ್ಕೆ ಬೇಸಿಗೆ ದಿನಗಳಲ್ಲಿ ಕುಡಿಯುವ ನೀರಿಗೆ ಅಹಾಕಾರ ಉಂಟಾಗಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಕೈಗೊಂಡಿರುವ ಕ್ರಮಗಳೇನು;

(ಆ) ನಗರಾಭಿವೃದ್ಧಿ ಇಲಾಖೆಯಿಂದ ಜಿಲ್ಲೆಗೆ ಕುಡಿಯುವ ನೀರಿನ ಸಲುವಾಗಿ ೨೦೧೩–೧೪ನೇ ಸಾಲಿನಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ?

## ಮಲೆ ಮಹದೇಶ್ವರ ಬೆಟ್ಟದಲ್ಲಿ ಮುಜರಾಯಿ ಇಲಾಖೆ ಬಸ್ ಸೌಲಭ್ಯ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯ (೧೯೭) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಲೆ ಮಹದೇಶ್ವರ ಬೆಟ್ಟಕ್ಕೆ ಹೋಗಿ ಬರುವ ಪ್ರಯಾಣಿಕರಿಗೆ ಸಾರಿಗೆ ಸೌಲಭ್ಯ ಒದಗಿಸುವ ಸಲುವಾಗಿ ಓಡಿಸುತ್ತಿರುವ ಮುಜರಾಯಿ ಇಲಾಖೆಯ ಮಾಲೀಕತ್ವಕ್ಕೆ ಸೇರಿದ ಬಸ್‌ಗಳ ಸಂಖ್ಯೆ ಎಷ್ಟು; ಸದರಿ ಬಸ್‌ಗಳು ಯಾವ ಯಾವ ಮಾರ್ಗಗಳಲ್ಲಿ ಎಷ್ಟೆಷ್ಟು ಟ್ರಿಪ್‌ಗಳಲ್ಲಿ ಸಂಚರಿಸುತ್ತಿವೆ; (ವಿವರ ಒದಗಿಸುವುದು)

(ಆ) ಸದರಿ ಬಸ್‌ಗಳ ಸೇವೆಯಿಂದ ಮುಜರಾಯಿ ಇಲಾಖೆಗೆ ಕಳೆದ ಮೂರು ವರ್ಷಗಳಲ್ಲಿ ಬಂದಿರುವ ಲಾಭ ಮತ್ತು ನಷ್ಟ ಎಷ್ಟು; ಬಸ್‌ಗಳ ನಿರ್ವಹಣೆಗೆ ತಗಲುತ್ತಿರುವ ವೆಚ್ಚ ಎಷ್ಟು;

(ಇ) ಸದರಿ ಬಸ್‌ಗಳ ಖರೀದಿ ನಿರ್ವಹಣೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ದೂರುಗಳು ಬಂದಿವೆಯೇ; ಈ ಬಗ್ಗೆ ತನಿಖೆ ನಡೆಸಿ ಕ್ರಮ ತೆಗೆದುಕೊಳ್ಳಲಾಗಿದೆಯೇ? (ವಿವರ ಒದಗಿಸುವುದು)

## ಮೈಸೂರು ನಗರ ನೀರು ಸರಬರಾಜು ವ್ಯವಸ್ಥೆಯ ನಿರ್ವಹಣೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೩೪೦ (೧೯೮) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರ ನೀರು ಸರಬರಾಜು ನಿರ್ವಹಣೆ ಮತ್ತು ಮೇಲ್ವಿಚಾರಣೆಯನ್ನು ಕರ್ನಾಟಕ ನಗರ ನೀರು ಸರಬರಾಜು ಮಂಡಳಿಗೆ ವಹಿಸಲಾಗಿದೆಯೇ; ಎಂದಿನಿಂದ ಈ ವ್ಯವಸ್ಥೆ ಮಾಡಲಾಗಿದೆ; ಇದಕ್ಕೆ ಕಾರಣಗಳೇನು; (ವಿವರಗಳನ್ನು ಒದಗಿಸುವುದು)

(ಆ) ಮೈಸೂರು ನಗರಕ್ಕೆ ಅನೇಕ ದಶಕಗಳ ಕಾಲ ನೀರು ಸರಬರಾಜು ಮಾಡುತ್ತಿದ್ದ ವಾಣಿ ವಿಲಾಸ ವಾಟರ್ ವರ್ಕ್ಸ್‌ಗೆ (ನೀರು ಸರಬರಾಜು) ಕಾರ್ಯಕಾರವನ್ನು ಮೇಲ್ದರ್ಜೆಗೇರಿಸಿ, ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಾದರಿಯಲ್ಲಿ ಪುನರ್‌ರಚಿಸಿ, ಮೈಸೂರು ನಗರಕ್ಕೆ ನೀರು ಸರಬರಾಜು ಮಾಡುವ ಜವಾಬ್ದಾರಿಯನ್ನು ಅದಕ್ಕೆ ವಹಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

(ಇ) ಮೈಸೂರು ಮಹಾನಗರವು ದಿನೇ ದಿನೇ ಬೆಳೆಯುತ್ತಿದ್ದು, ಈ ಮಹಾನಗರಕ್ಕೆ ಒಂದು ಪ್ರತ್ಯೇಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ?

## ೨೦೧೨–೧೩ನೇ ಸಾಲಿನಿಂದ ೨೦೧೪–೧೫ನೇ ಸಾಲಿನವರೆಗೆ ಅಮೃತ ಯೋಜನೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧ (೫೩೭) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨೦೧೨–೧೩ನೇ ಸಾಲಿನಿಂದ ೨೦೧೪–೧೫ನೇ ಸಾಲಿನವರೆಗೆ ಅಮೃತ ಯೋಜನೆಯಡಿಯಲ್ಲಿ ಬಾಗಲಕೋಟೆ, ಬಿಜಾಪುರ ಹಾಗೂ ಗದಗ ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಹಸು ಮತ್ತು ಎಮ್ಮೆಯನ್ನು ಕೊಂಡುಕೊಳ್ಳಲು ಯಾರ್‍ಯಾರಿಗೆ ಎಷ್ಟು ಮೊತ್ತದ ಸಹಾಯಧನವನ್ನು ನೀಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಹಾಯಧನವನ್ನು ಕೋರಿ ಬಂದ ಪ್ರಸ್ತಾವನೆಗಳೆಷ್ಟು, ಹಾಗೂ ಮಂಜೂರು ಮಾಡಿದ ಸಹಾಯಧನವೆಷ್ಟು? (ಮಾಹಿತಿ ನೀಡುವುದು)

## ಬಾಗಲಕೋಟೆ ಮತ್ತು ಬಿಜಾಪುರ ಜಿಲ್ಲೆಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೨ (೫೩೮) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಹಾಗೂ ಬಿಜಾಪುರ ಜಿಲ್ಲೆಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳನ್ನು ಸಕ್ರಮಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಇಂತಹ ಈ ಅಕ್ರಮ ಮನೆಗಳನ್ನು ಸಕ್ರಮಗೊಳಿಸಲು ಸರ್ಕಾರ ರೂಪಿಸಿರುವ ನಿಯಮಗಳೇನು? (ಮಾಹಿತಿ ನೀಡುವುದು)

## ಬಾಗಲಕೋಟೆ ನಗರದಲ್ಲಿ ಸಣ್ಣ ಕೈಗಾರಿಕೆಗಳ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೩(೫೩೬) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ನಗರದಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಜಮೀನು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಮಂಜೂರಾದ ಜಮೀನಿನ ವಿಸ್ತೀರ್ಣವೆಷ್ಟು ಹಾಗೂ ಬಿಡುಗಡೆ ಮಾಡಿರುವ ಹಣ ಎಷ್ಟು; ಮಾಹಿತಿ ನೀಡುವುದು;

(ಇ) ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸುವ ಕಾರ್ಯವನ್ನು ಯಾರಿಗೆ ವಹಿಸಲಾಗಿದೆ ಮತ್ತು ಯಾವಾಗ ಅಭಿವೃದ್ಧಿಪಡಿಸಲಾಗುವುದು? (ಮಾಹಿತಿ ನೀಡುವುದು)

## ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯ ಸಣ್ಣ ಕೈಗಾರಿಕೆಯ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೩೪೪ (೫೪೦) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ನಗರದಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಜಮೀನು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಮಂಜೂರಾದ ಜಮೀನಿನ ವಿಸ್ತೀರ್ಣವೆಷ್ಟು ಹಾಗೂ ಬಿಡುಗಡೆ ಮಾಡಿರುವ ಹಣ ಎಷ್ಟು; ಮಾಹಿತಿ ನೀಡುವುದು;

(ಇ) ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿ ಪಡಿಸುವ ಕಾರ್ಯವನ್ನು ಯಾರಿಗೆ ವಹಿಸಲಾಗಿದೆ ಮತ್ತು ಯಾವಾಗ ಅಭಿವೃದ್ಧಿಪಡಿಸಲಾಗುವುದು; ಮಾಹಿತಿ ನೀಡುವುದು?

## ಪ್ರಸ್ತುತ ವರ್ಷದಲ್ಲಿ ಪಶು ಭಾಗ್ಯ ಯೋಜನೆಯ ಜಾರಿಯ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೫ (೫೪೬) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ವರ್ಷದಲ್ಲಿ 'ಪಶು ಭಾಗ್ಯ' ಯೋಜನೆಯನ್ನು ಜಾರಿಗೆ ತರಲಾಗಿದೆಯೇ;

(ಆ) ತರಲಾಗಿದ್ದಲ್ಲಿ ಸರ್ಕಾರ ಪ್ರಸಕ್ತ ವರ್ಷದಲ್ಲಿ ನಿಗಧಿಪಡಿಸಿದ ಅನುದಾನದ ಮೊತ್ತ ಎಷ್ಟು;

(ಇ) ಈ ಯೋಜನೆಯ ಉದ್ದೇಶಗಳೇನು ಹಾಗೂ ಇರುವ ಮಾನದಂಡಗಳೇನು;

(ಈ) ಈ ಯೋಜನೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಉ) ಕೊಪ್ಪಳ ಜಿಲ್ಲೆಯಲ್ಲಿ ಎಷ್ಟು ರೈತರು ಈ ಯೋಜನೆಯ ಲಾಭವನ್ನು ಪಡೆದಿದ್ದಾರೆ; ತಾಲ್ಲೂಕುವಾರು ಮಾಹಿತಿ ನೀಡುವುದು?

## ಕೊಪ್ಪಳ ಜಿಲ್ಲೆಯಲ್ಲಿರುವ ಪೊಲೀಸ್ ಸಿಬ್ಬಂದಿಗಳ ಮಂಜೂರಾತಿ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೬ (೫೪೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ .–

(ಅ) ಕೊಪ್ಪಳ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಲ್ಲಿ ಮಂಜೂರು ಆಗಿರುವ ಖಾಲಿ ಮತ್ತು ಭರ್ತಿ ಇರುವ ಹುದ್ದೆಗಳ ಮಾಹಿತಿಯನ್ನು ಹುದ್ದೆವಾರು ಮತ್ತು ಠಾಣಾವಾರು ನೀಡುವುದು;

(ಆ) ಜಿಲ್ಲೆಯಲ್ಲಿ ಪೊಲೀಸ್ ಹುದ್ದೆಗಳು ಖಾಲಿ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ ಈ ಕುರಿತು ಕೈಗೊಂಡ ಕ್ರಮಗಳೇನು;

(ಈ) ಹೊಸದಾಗಿ ನೇಮಕಾತಿಯನ್ನು ಜರುಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ವಿವರ ನೀಡುವುದು?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು